ಸಂಪುಟ : 10 ಸಂಚಿಕೆ: 81 ಪುಟ : 4+2 ಬೆಲೆ: 3.00 ಮಂಗಳವಾರ ಎಪ್ರಿಲ್ 29 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 81 Pages : 4+2 Price : 3.00 Tuesday April 29 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಎಪ್ರಿಲ್-29ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

**ಸ್ಥಳಗಳ ವಿವರ:** ವಾರ್ಡ್ ನಂ. 16, 19 - ಮಡಿವಾಳ ಗುಡಿ, ಕುಂಬಾರ ಓಣಿ, ಬಾಗಲಕೋಟೆಯವರ ಲೈನ್, ಅಂಬೇಡ್ಕರ್ ನಗರ, ಹನುಮಂತ ದೇವರ ಗುಡಿ, ಡೋರಗಲ್ಲಿ, ಕೋನೇರಿ ಹೊಂಡ ಹೊಸ ಲೈನ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 13, 14 - ಟ್ಯಾಗೋರ ರಸ್ತೆ, ಹಣಗಿ ಜೀನ್, ಕುರುಡಗಿಯವರ ಲೈನ್, ಕೊಣ್ಣೂರರವರ ಲೈನ್, ಕಲ್ಮನಿಯವರ ಲೈನ್, ಜನತಾ ಗೂಡೌನ, ವಕೀಲರ ಚಾಳ, ಕೆ ಸಿ ರಾಣಿ ರೋಡ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 21, 23 - ಎಲಿಗಾರ ಪ್ಲಾಟ್, ಮಸೂತಿ ಲೈನ್, ಕರಬಿಷ್ಠಿ ಅವರ ಲೈನ್, ಸ್ಮಶಾನ ಗಟ್ಟಿ 4 ಭಾಗಗಳು, ಉಳಿದ ಕೆಲವು ಭಾಗಗಳು. ವಾರ್ಡ್ ನಂ. 6 - ಮಾಕಾಪುರ ಲೈನ್, ಪವಾರರವರ ಲೈನ್ ಉಳಿದ ಕೆಲವು ಭಾಗಗಳು.

**ಪ್ರಕಟಣೆ:** ತಮಗೆ ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ್ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಹಾಗೂ ತಮ್ಮ ನೀರಿನ ಕರ ಪಾವತಿಸುವಲ್ಲಿ ತಾವು ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕು. ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆ ದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ್ ಮಾಡಲಾಗುವುದು ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕೇಂದ್ರ ಸರ್ಕಾರದ ಜನ ವಿರೋಧಿ, ದೇಶ ವಿರೋಧಿ ನೀತಿಯ ವಿರುದ್ಧ ಗುಡುಗಿದ ಸಿಎಂ ಸಿದ್ದರಾಮಯ್ಯ

# ನಿಮ್ಮ ಅಪಪ್ರಚಾರಕ್ಕೆ ಈ ಸಿದ್ದರಾಮಯ್ಯ ಹೆದರುವವನಲ್ಲ!

■ವಿಜಯಸಾಕ್ಷಿ ಸುದ್ದಿ, ಬೆಳಗಾವಿ

ನಾವು ಬಿಜೆಪಿ, ಆರ್‌ಎಸ್‌ಎಸ್‌ನ ಗೊಡ್ಡು ಬೆದರಿಕೆಗಳಿಗೆ ಜಗ್ಗಲ್ಲ-ಬಗ್ಗಲ್ಲ. ನಿಮ್ಮನ್ನೆಲ್ಲಾ ಸಾರ್ವಜನಿಕವಾಗಿ ಎದುರಿಸುವ ಶಕ್ತಿ ನನಗಿದೆ. ನಮ್ಮ ಕಾರ್ಯಕರ್ತರಿಗೂ ಇದೆ ಎಂದು ಸಿಎಂ ಸಿದ್ದರಾಮಯ್ಯ ಗುಡುಗಿದರು.

ಎಐಸಿಸಿ ಆಯೋಜಿಸಿದ್ದ ಕೇಂದ್ರ ಸರ್ಕಾರದ ಬೆಲೆ ಏರಿಕೆ, ಜನ ವಿರೋಧಿ ನೀತಿ ಹಾಗೂ ದೇಶ ವಿರೋಧಿ ಆಡಳಿತ ವಿರೋಧಿಸಿ ಹಮ್ಮಿಕೊಂಡಿದ್ದ ಖಂಡನಾ ಸಮಾವೇಶವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಬಿಜೆಪಿಯ ದೇಶ ವಿರೋಧಿ ಆಡಳಿತ, ಜನ ವಿರೋಧಿ ಕ್ರಮಗಳನ್ನು ಖಂಡಿಸಿ ಭಾಷಣ ಮಾಡುವ ವೇಳೆ ಮುಖ್ಯಮಂತ್ರಿಗಳ ಭಾಷಣಕ್ಕೆ ಅಡ್ಡಿಪಡಿಸಿದ ಬಿಜೆಪಿ ಕಿಡಿಗೇಡಿಗಳ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದ ಸಿ.ಎಂ ಸಿದ್ದರಾಮಯ್ಯ, ಬಿಜೆಪಿ, ಆರ್‌ಎಸ್‌ಎಸ್‌ಗೆ ನೇರವಾಗಿ ಸವಾಲೆಸೆದು ಸೆಡ್ಡು ಹೊಡೆದರು.

ಕಳೆದ ಹತ್ತು ವರ್ಷಗಳಿಂದ ನಿರಂತರವಾಗಿ ಬೆಲೆ ಏರಿಕೆ ಮಾಡುತ್ತಾ, ಭಾರತೀಯರ ಬದುಕನ್ನು ಬೆಲೆ ಏರಿಕೆಯಲ್ಲಿ ಬೇಯಿಸುತ್ತಾ, ಭಾರತೀಯ ಸಮಾಜವನ್ನು ಛಿದ್ರಗೊಳಿಸುತ್ತಾ, ಬಿರುಕು ಮೂಡಿಸುತ್ತಾ ಜನದ್ರೋಹಿಯಾಗಿ ವರ್ತಿಸುತ್ತಿರುವುದು ಬಿಟ್ಟರೆ ಬೇರೇನು ಮಾಡಿದ್ದೀರಿ ಜನರಿಗೆ ತೋರಿಸಿ ಎಂದು ಸವಾಲು ಹಾಕಿದರು. ಮೊನ್ನೆ ಕಾಶ್ಮೀರದಲ್ಲಿ ಅಮಾಯಕ ಭಾರತೀಯರನ್ನು, ಕರ್ನಾಟಕದ ಮೂವರು ಅಮಾಯಕರನ್ನು ಅಮಾನುಷವಾಗಿ ಹತ್ಯೆ ಮಾಡಿ ಹೋದರಲ್ಲಾ, ಇದು ಕೇಂದ್ರ ಸರ್ಕಾರದ ಭದ್ರತಾ ಲೋಪ ಅಲ್ಲವೇ, ಭಾರತೀಯರಿಗೆ ರಕ್ಷಣೆ ಕೊಡುವಲ್ಲಿ ಕೇಂದ್ರ ವಿಫಲವಾಗಿರುವುದನ್ನು ನಾವು ಭಾರತೀಯರು ಪ್ರಶ್ನಿಸಬಾರದೇ, ಪ್ರಶ್ನಿಸಿದರೆ ಕಾರ್ಯಕ್ರಮಕ್ಕೆ ಅಡ್ಡಿಪಡಿಸುತ್ತೀರಾ ಎಂದು ಪ್ರಶ್ನಿಸಿದರು.

ಸ್ವಾತಂತ್ರ್ಯ ಹೋರಾಟದಿಂದ ಹಿಡಿದು ಆಧುನಿಕ ಭಾರತ ನಿರ್ಮಾಣದವರೆಗೂ ಬಿಜೆಪಿ, ಸಂಘ ಪರಿವಾರದ ಕೊಡುಗೆ ಏನಿದೆ, ಭಾರತೀಯ ಸಮಾಜವನ್ನು ಬಿರುಕು ಮೂಡಿಸಿದ್ದು ಬಿಟ್ಟರೆ ಇಷ್ಟು ವರ್ಷಗಳಲ್ಲಿ ಭಾರತಕ್ಕಾಗಿ ನಿಮ್ಮ ಕೊಡುಗೆ ಏನು ಎಂದು ದೇಶದ ಜನಕ್ಕೆ ವಿವರಿಸಿ ಎಂದು ಸವಾಲು ಹಾಕಿದರು.

ನಾವು ಹಾಲಿನ ದರ 4 ರೂ ಹೆಚ್ಚಿಸಿ, 4 ರೂಪಾಯಿಯನ್ನು ಪೂರ್ತಿಯಾಗಿ ರೈತರಿಗೆ, ಗೋಪಾಲಕರಿಗೆ, ಗೋ ಸಾಕಾಣಿಕೆದಾರರಿಗೆ ವರ್ಗಾಯಿಸಿದ್ದೇವೆ. ಇದರಲ್ಲಿ ಒಂದು ರೂಪಾಯಿ ಕೂಡ ಸರ್ಕಾರಕ್ಕೆ ಬರದು. ನಾವು 4 ರೂ ಹೆಚ್ಚಿಸಿದರೂ ಹಾಲಿನ ದರ ಇಡೀ ದೇಶದಲ್ಲಿ ಕಡಿಮೆ ಇರುವುದು ನಮ್ಮ ರಾಜ್ಯದಲ್ಲಿ ಮಾತ್ರ. ಬಸ್ ದರ, ನೀರಿನ ದರ, ವಿದ್ಯುತ್ ದರ ಅಕ್ಕ ಪಕ್ಕದ ರಾಜ್ಯಗಳಿಗಿಂತ ಅತ್ಯಂತ ಕಡಿಮೆ ಇರುವುದು ನಮ್ಮ ರಾಜ್ಯದಲ್ಲಿ ಮಾತ್ರ. ನಿಮ್ಮ ಸುಳ್ಳು, ಅಪಪ್ರಚಾರ, ಬೆದರಿಕೆಗೆ ಈ ಸಿದ್ದರಾಮಯ್ಯ ಹೆದರುವವನಲ್ಲ. ನಿಮ್ಮನ್ನು ಮೆಟ್ಟಿ ನಿಲ್ತೀವಿ. ಕಾಂಗ್ರೆಸ್ ಪಕ್ಷಕ್ಕೆ ಆ ಶಕ್ತಿ ಇನ್ನೂ ಇದೆ ಎಂದರು.





**ಸವಾಲೆಸೆದ ಸಿಎಂ**

* ಕೇಂದ್ರ ಸರ್ಕಾರ ಭಾರತೀಯರನ್ನು ಸುಳ್ಳಿನ ಪ್ರವಾಹದಲ್ಲಿ ಮುಳುಗಿಸಿ ಬೆಲೆ ಏರಿಕೆಯ ಬರೆ ಹಾಕುತ್ತಿದೆ:
* ಅಕ್ಕಿ, ಎಣ್ಣೆ, ಚಿನ್ನ-ಬೆಳ್ಳಿ, ಗೊಬ್ಬರ, ಕಾಳು, ಬೇಳೆ, ಡೀಸೆಲ್, ಪೆಟ್ರೋಲ್, ಸಿಲಿಂಡರ್ ಎಲ್ಲದರ ಬೆಲೆ ಏರಿಸಿದ್ದೀರಿ. ಯಾವುದನ್ನು ಬಿಟ್ಟಿದ್ದೀರಿ ಹೇಳಿ.
* ನಿಮ್ಮನ್ನು ಸಾರ್ವಜನಿಕವಾಗಿ ಎದುರಿಸುವ ಶಕ್ತಿ ನನಗಿದೆ:
* ಕಾರ್ಯಕ್ರಮಕ್ಕೆ ಅಡ್ಡಿಪಡಿಸಿದ ಬಿಜೆಪಿ-ಆರ್‌ಎಸ್‌ಎಸ್ ಕಿಡಿಗೇಡಿಗಳಿಗೆ ಧಿಕ್ಕಾರ ಕೂಗಿದವರಿಗೆ ಸವಾಲೆಸೆದ ಸಿಎಂ ಸಿದ್ದರಾಮಯ್ಯ.

> ಕಚ್ಚಾ ತೈಲ ಬೆಲೆ ಕಡಿಮೆ ಇದ್ದಾಗಲೂ ಪೆಟ್ರೋಲ್, ಡೀಸೆಲ್ ಬೆಲೆಯನ್ನು ನಿರಂತರವಾಗಿ ಏರಿಕೆ ಮಾಡುತ್ತಲೇ ಇರುವುದು ಭಾರತೀಯರಿಗೆ ಬಿಜೆಪಿ ಬಗೆಯುತ್ತಿರುವ ಮಹಾ ದ್ರೋಹವಾಗಿದೆ. ಬಿಜೆಪಿ ನಿರಂತರವಾಗಿ ಭಾರತೀಯರನ್ನು ಸುಳ್ಳುಗಳ ಸರಮಾಲೆಯಲ್ಲಿ ಮುಳುಗಿಸಿ, ಸಮಾಜದಲ್ಲಿ ಬಿರುಕು ಮೂಡಿಸಿ ಕಾಲ ಕಳೆಯುತ್ತಿದೆ. ನಿಮಗೆ ತಕ್ಕ ಉತ್ತರ ಕೊಡುವ ಶಕ್ತಿ ನಮಗಿದೆ.
>
> - ಸಿಎಂ ಸಿದ್ದರಾಮಯ್ಯ.

## ಅ.ಭಾ ವೀರಶೈವ ಮಹಾಸಭಾದಿಂದ ಬಸವ ಜಯಂತಿಯ ಕಾರ್ಯಕ್ರಮಗಳು

■ವಿಜಯಸಾಕ್ಷಿ ಸುದ್ದಿ, ಗದಗ



ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಗದಗ ಜಿಲ್ಲಾ ಘಟಕವು ಬಸವ ಜಯಂತಿಯ ಅಂಗವಾಗಿ ವಿವಿದ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ.

ಎ. 30ರಂದು ಮುಂಜಾನೆ 8 ಗಂಟೆಗೆ ಗದಗ ಎಪಿಎಂಸಿ ಮಾರುಕಟ್ಟೆಯಲ್ಲಿರುವ ಕೆ.ಓ.ಎಫ್ ಹತ್ತಿರ ಇರುವ ಲಿಂಗರಾಜ ಗೋಡೌನ್‌ನಲ್ಲಿ ಬಸವ ಜಯಂತಿಯ ವಿಶೇಷ ಪೂಜೆಯ ಬಳಿಕ 8.30 ಗಂಟೆಗೆ ಎಪಿಎಂಸಿ ಚಕ್ಕಡಿಯವರ ಎತ್ತುಗಳಿಗೆ ತವಡು, ಹೊಟ್ಟು ಪಶು ಆಹಾರ ವಿತರಣಾ ಕಾರ್ಯಕ್ರಮ, 8.45ಕ್ಕೆ ಗದುಗಿನ ವೀರಶೈವ ಜನರಲ್ ಲೈಬ್ರರಿಯ ಆವರಣದ ವೀರಶೈವ ಮಹಾಸಭಾ ಕಾರ್ಯಾಲಯದಲ್ಲಿ ಬಸವಣ್ಣನವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಗೌರವ ಸಲ್ಲಿಸುವ ಕಾರ್ಯಕ್ರಮವಿದೆ.

9.15 ಗಂಟೆಗೆ ಗದುಗಿನ ▸▸3ನೇ ಪುಟಕ್ಕೆ

### ಪರಿಶಿಷ್ಟ ಜಾತಿಯ ಒಳಮೀಸಲಾತಿ ವರ್ಗೀಕರಣ ಸಮೀಕ್ಷೆ । ತರಬೇತಿದಾರರ ಕಾರ್ಯಾಗಾರದಲ್ಲಿ ಡಿಸಿ ಸೂಚನೆ

# ತಾಳ್ಮೆಯಿಂದ ಸಮೀಕ್ಷೆ ಕೈಗೊಳ್ಳಿ

■ವಿಜಯಸಾಕ್ಷಿ ಸುದ್ದಿ, ಗದಗ

ಪರಿಶಿಷ್ಟ ಜಾತಿಗಳ ಒಳ ಮೀಸಲಾತಿ ಸೌಲಭ್ಯ ಕಲ್ಪಿಸುವ ಸಂಬಂಧ ನ್ಯಾಯಮೂರ್ತಿ ಎಚ್.ಎನ್. ನಾಗಮೋಹನ ದಾಸ್ ನೇತೃತ್ವದ ಏಕಸದಸ್ಯ ವಿಚಾರಣಾ ಆಯೋಗದ ಮಧ್ಯಂತರ ವರದಿಗೆ ಒಪ್ಪಿಗೆ ಸೂಚಿಸಲಾಗಿರುವುದು ರಾಜ್ಯ ಸರ್ಕಾರದ ಮಹತ್ವದ ಹೆಜ್ಜೆಯಾಗಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಸಮಾಜ ಕಲ್ಯಾಣ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಇವರುಗಳ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಪರಿಶಿಷ್ಟ ಜಾತಿಯ ಒಳಮೀಸಲಾತಿ ವರ್ಗೀಕರಣ ಸಮೀಕ್ಷೆ ಕುರಿತು ತಾಲೂಕು ಮಟ್ಟದ ತರಬೇತಿದಾರರ ತರಬೇತಿ ಕಾರ್ಯಾಗಾರದಲ್ಲಿ ಅವರು ಮಾತನಾಡುತ್ತಿದ್ದರು.

ಈ ಹಿನ್ನೆಲೆಯಲ್ಲಿ ದತ್ತಾಂಶ ಸಂಗ್ರಹಕ್ಕೆ ಸಮೀಕ್ಷೆ ನಡೆಸಲಾಗುತ್ತಿದೆ. ಮೇ. 5ರಿಂದ ಮೇ. 17ರವರೆಗೆ ಸಮೀಕ್ಷೆದಾರರು ಮನೆ ಮನೆಗೆ ಭೇಟಿ ನೀಡಿ ಸಮೀಕ್ಷೆ ಕೈಗೊಳ್ಳುವರು. ಮೇ. 19ರಿಂದ ಮೇ. 21ರವರೆಗೆ ಸಮೀಕ್ಷೆ ಬ್ಲಾಕ್‌ಗಳಲ್ಲಿ ವಿಶೇಷ ಶಿಬಿರಗಳನ್ನು ಕೈಗೊಂಡು ಭೇಟಿ ಅವಧಿಯಲ್ಲಿ ಬಿಟ್ಟು ಹೋದ ಪರಿಶಿಷ್ಟ ಜಾತಿ ಕುಟುಂಬಗಳ ಮಾಹಿತಿಯನ್ನು ಸಂಗ್ರಹಿಸಲಾಗುವುದು ಎಂದು ತಿಳಿಸಿದರು.




> ಸರ್ಕಾರದ ಸೌಲಭ್ಯಗಳು ಪರಿಶಿಷ್ಟ ಜಾತಿಯ ಒಳಪಂಗಡಗಳಿಗೆ ಸಮಾನವಾಗಿ ತಲುಪಬೇಕು ಎನ್ನುವ ಹಿನ್ನೆಲೆಯಲ್ಲಿ ಈ ಸಮೀಕ್ಷೆ ಕೈಗೊಳ್ಳಲಾಗುತ್ತಿದೆ. ಮನೆ ಮನೆಗೆ ಹೋಗಿ ಸಮೀಕ್ಷೆದಾರರು ಸಮೀಕ್ಷೆ ಮಾಡುವಾಗ ಸಹನೆ, ತಾಳ್ಮೆಯಿಂದ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ ಮಹೇಶ ಪೋತದಾರ, ತಾಲೂಕು ಮಟ್ಟದ ತರಬೇತಿದಾರರು ಹಾಜರಿದ್ದರು.

ಸಂಪನ್ಮೂಲ ವ್ಯಕ್ತಿ ಬಿ.ಜಿ. ಗಿರಿತಿಮ್ಮಣ್ಣವರ ಸೇರಿದಂತೆ ಮಾಸ್ಟರ್ ಟ್ರೈನರ್‌ಗಳು ತರಬೇತಿದಾರರಿಗೆ ತರಬೇತಿ ನಡೆಸಿಕೊಟ್ಟರು.

### ಸಿಡಿಲು ಬಡಿದು ಮೃತಪಟ್ಟ ಯುವಕನ ಕುಟುಂಬಸ್ಥರಿಗೆ ಶಾಸಕ ಜಿ.ಎಸ್. ಪಾಟೀಲ ಅಭಯ

# ಕುಟುಂಬದ ಸುಖ-ದುಃಖಗಳಲ್ಲಿ ನಾನಿದ್ದೇನೆ



■ವಿಜಯಸಾಕ್ಷಿ ಸುದ್ದಿ, ರೋಣ

ಸವಡಿ ಗ್ರಾಮದಲ್ಲಿ ಎಪ್ರಿಲ್ 24ರಂದು ಸಿಡಿಲು ಬಡಿದು ಸಾನ್ನಪ್ಪಿದ ಯುವಕ ಕೋಟೇಶ ಶಿವಪ್ಪ ನರೆಗಲ್ಲ (25) ಕುಟುಂಬದವರನ್ನು ಸೋಮವಾರ ಭೇಟಿಯಾದ ಶಾಸಕ ಜಿ.ಎಸ್. ಪಾಟೀಲ, ಕುಟುಂಬಸ್ಥರಿಗೆ ಧೈರ್ಯ ಹೇಳಿ, ಮೃತ ಯುವಕನ ಕುಟುಂಬಕ್ಕೆ ಸರಕಾರದಿಂದ 5 ಲಕ್ಷ ರೂ.ಗಳ ಪರಿಹಾರದ ಆದೇಶ ಪ್ರತಿಯನ್ನು ಹಸ್ತಾಂತರಿಸಿದರು.

ಮೃತ ಯುವಕನ ತಾಯಿಯೂ ಕೆಲ ತಿಂಗಳುಗಳ ಹಿಂದೆ ಮೃತರಾಗಿದ್ದು, ಈಗ ಕುಟುಂಬಕ್ಕೆ ಆಸರೆಯಾಗಿದ್ದ ಮಗನನ್ನೂ ಕಳೆದುಕೊಂಡ ತಂದೆಯ ದುಃಖ ನೆರೆ-ಹೊರೆಯವರಲ್ಲಿ ಕಣ್ಣೀರು ತರಿಸಿತ್ತು. ಮನೆ ಮಗನ ಸಾವು ಕುಟುಂಬಕ್ಕೆ ತುಂಬಲಾರದ ನಷ್ಟವಾಗಿದೆ.

ಸರಕಾರದಿಂದ ಕುಟುಂಬಕ್ಕೆ 5 ಲಕ್ಷ ರೂ.ಗಳ ಪರಿಹಾರವನ್ನು ನೀಡಲಾಗಿದ್ದು, ಜೊತೆ-ಗೆ ಕುಟುಂಬಸ್ಥರ ಕಷ್ಟ-ಸುಖಗಳಲ್ಲಿ ತಾವೂ ಇರುವುದಾಗಿ ತಿಳಿಸಿದರಲ್ಲದೆ, ತಂದೆಯನ್ನು ಜೋಪಾನ ಮಾಡಿ ಎಲ್ಲದಕ್ಕೂ ದೇವರಿದ್ದಾನೆ ಎಂದು ಮೃತ ಕೋಟೇಶನ ಸಹೋದರಿಯರಿಗೆ ಅಭಯ ನೀಡಿದರು.

ತಹಸೀಲ್ದಾರ ನಾಗರಾಜ ಕೆ, ಯೂಸುಫ್ ಇಟಗಿ, ಬಸವರಾಜ ನವಲಗುಂದ, ಸಂಜಯ ದೊಡ್ಡಮನಿ, ಗ್ರಾ.ಪಂ ಅಧ್ಯಕ್ಷ-ಉಪಾಧ್ಯಕ್ಷರು, ಸದಸ್ಯರು, ಗ್ರಾಮದ ಮುಖಂಡರು ಸೇರಿದಂತೆ ಕಂದಾಯ ಇಲಾಖೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

### ಜ. ಶ್ರೀ ರೇಣುಕಾಚಾರ್ಯರ ಜಯಂತಿ ಯುಗಮಾನೋತ್ಸವ ಸಮಾರಂಭದಲ್ಲಿ ಮುಕ್ತಿಮಂದಿರ ಶ್ರೀಗಳು

# ಧರ್ಮವನ್ನು ರಕ್ಷಿಸಿದಲ್ಲಿ ಮನುಕುಲಕ್ಕೆ ಶಾಂತಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಜಗದ್ಗುರು ರೇಣುಕಾಚಾರ್ಯರು ವೀರಶೈವ ಧರ್ಮದ ಮಹಾನ್ ಶರಣ ಮತ್ತು ಗುರುಗಳಲ್ಲಿ ಒಬ್ಬರು. ಇವರ ತತ್ವ, ಬದುಕಿನ ಚರಿತ್ರೆ, ಮತ್ತು ಧಾರ್ಮಿಕ ಸಾಧನೆಗಳು ಭಾರತೀಯ ಸಾಮಾಜಿಕ ಮತ್ತು ಧಾರ್ಮಿಕ ಚರಿತ್ರೆಯಲ್ಲಿ ಮಹತ್ವಪೂರ್ಣ ಸ್ಥಾನವನ್ನು ಪಡೆದಿವೆ. ಅವರ ತತ್ವ-ಸಿದ್ಧಾಂತಗಳು ಸರ್ವಕಾಲಕ್ಕೂ ಶ್ರೇಷ್ಠವಾಗಿವೆ ಎಂದು ಮುಕ್ತಿಮಂದಿರ ಧರ್ಮಕ್ಷೇತ್ರದ ಪಟ್ಟಾಧ್ಯಕ್ಷರು ಹಾಗೂ ಅಖಿಲ ಭಾರತ ಶಿವಾಚಾರ್ಯರ ಸಂಘದ ಅಧ್ಯಕ್ಷರೂ ಆಗಿರುವ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯ ಮಹಾಸ್ವಾಮಿಗಳು ನುಡಿದರು.

ಅವರು ಸೋಮವಾರ ಪಟ್ಟಣದ ಶ್ರೀ ರಂಭಾಪುರಿ ಜ. ವೀರಗಂಗಾಧರ ಸಮುದಾಯ ಭವನದಲ್ಲಿ ಜಗದ್ಗುರು ಶ್ರೀ ರೇಣುಕಾಚಾರ್ಯರ ಜಯಂತಿ ಯುಗಮಾನೋತ್ಸವ ಹಾಗೂ ಧರ್ಮಸಭೆಯ ದಿವ್ಯ ಸಾನ್ನಿಧ್ಯ ವಹಿಸಿ ಮಾತನಾಡುತ್ತಿದ್ದರು.

ಮಾನವ ಧರ್ಮ ಪಂಚಾಚಾರ್ಯ ಜಗದ್ಗುರುಗಳ ಧರ್ಮವಾಗಿದೆ. ಮಾನವ ಧರ್ಮವನ್ನು ರಕ್ಷಿಸಿದಲ್ಲಿ ಮನುಕುಲಕ್ಕೆ ಶಾಂತಿ ಸಿಗುವುದು. ಈ ನಿಟ್ಟಿನಲ್ಲಿ ಜಗದ್ಗುರು ರೇಣುಕಾಚಾರ್ಯರು ಮನುಷ್ಯ ಕುಲಕ್ಕೆ ಮಾಡಿದ ಮಹಾನ್ ಕಾರ್ಯ ಎಂದೆಂದಿಗೂ ಸ್ಮರಣೀಯವಾಗಿರುತ್ತದೆ. ವೀರಶೈವ ಧರ್ಮ ಅತ್ಯಂತ ಪ್ರಾಚೀನ. ಇದರ ಇತಿಹಾಸ ಮತ್ತು ಪರಂಪರೆ ಅಪೂರ್ವ-ಅಮೋಘ.

ಕಾಯಕ ಮತ್ತು ದಾಸೋಹ ಭಾವನೆಗಳನ್ನು ಬೆಳೆಸಿದ ಶ್ರೇಯಸ್ಸು ವೀರಶೈವ ಧರ್ಮಕ್ಕಿದೆ. ಮಾನವ ಧರ್ಮವೇ ಶ್ರೇಷ್ಠವೆಂದು ಸಾರಿದ ಜಗದ್ಗುರು ರೇಣುಕಾಚಾರ್ಯರ ಆದರ್ಶ ಚಿಂತನೆಗಳು ಮುಂದಿನ ಪೀಳಿಗೆಗೂ ದಾರಿದೀಪವಾಗಿವೆ ಎಂದರು.

ನೇತೃತ್ವ ವಹಿಸಿದ್ದ ಕರೇವಾಡಿಮಠದ ಶ್ರೀ ಮಳೆಮಲ್ಲಿಕಾರ್ಜುನ ಶ್ರೀಗಳು ಮಾತನಾಡಿ, ಶ್ರೀ ರೇಣುಕರು ಅನುಗ್ರಹಿಸಿದ ಶಿವಾದ್ವೈತ ಸಿದ್ಧಾಂತ ಸಾರವೇ ವೀರಶೈವ ಧರ್ಮವಾಗಿದೆ ಎಂದು ನುಡಿದರು.

ಕಾರ್ಯಕ್ರಮದಲ್ಲಿ ಶಾಸಕ ಡಾ. ಚಂದ್ರು ಲಮಾಣಿ, ಮಾಜಿ ಶಾಸಕರಾದ ಜಿ.ಎಮ್. ಮಹಾಂತಶೆಟ್ಟರ, ಜಿ.ಎಸ್. ಗಡ್ಡದೇವರಮಠ, ಚನ್ನಪ್ಪ ಕೋಲಕಾರ, ಆನಂದ ಮೆಕ್ಕಿ, ಚಂಬಣ್ಣ ಬಾಳಿಕಾಯಿ, ಜಿ.ಎಸ್. ಬಾಳಿಹಳ್ಳಿಮಠ, ಬಿ.ಟಿ. ಪಾಟೀಲ, ಮುರಗಯ್ಯ ಹಿರೇಮಠ, ರುದ್ರು ಘಂಟಾಮಠ, ಗುರುಲಿಂಗಯ್ಯ ಹಿರೇಮಠ, ಬಸವೇಶ ಮಹಾಂತಶೆಟ್ಟರ, ಗುರಣ್ಣ ಪಾಟೀಲಕುಲಕರ್ಣಿ, ಬಸವರಾಜ ಮೆಣಸಿನಕಾಯಿ, ಅಶ್ವಿನಿ ಅಂಕಲಕೋಟಿ, ನಿಂಗಪ್ಪ ಜಾವೂರ, ಶಿವಯೋಗಿ ಅಂಕಲಕೋಟಿ, ಬಸಣ್ಣ ಬೆಂಡಿಗೇರಿ, ಜಿ.ಆರ್. ಲಕ್ಕುಂಡಿಮಠ, ಹೇಮಗಿರಿಮಠ, ನಿಂಗಪ್ಪ ಬನ್ನಿ, ಶಿವಲಿಂಗಯ್ಯ ಹಾಲೇವಾಡಿಮಠ, ಎಸ್.ವಿ. ಅಂಗಡಿ, ಆನಂದ ಸೇರಿದಂತೆ ಅನೇಕರಿದ್ದರು.



> ಸೋಮವಾರ ಪ್ರಾತಃಕಾಲ ಶ್ರೀ ಜ. ರೇಣುಕಾಚಾರ್ಯರ ಮೂರ್ತಿಗೆ ರುದ್ರಾಭಿಷೇಕ ನಂತರ ಪಂಚಾಚಾರ್ಯರ ಧ್ವಜಾರೋಹಣ ಕಾರ್ಯಕ್ರಮ, ಶ್ರೀ ಇಟಗಿ ಬಸವೇಶ್ವರ ದೇವಸ್ಥಾನದಿಂದ ಸಕಲ ವಾದ್ಯವೈಭವಗಳೊಂದಿಗೆ ಶ್ರೀ ಜ.ರೇಣುಕಾಚಾರ್ಯರ ಭಾವಚಿತ್ರದ ಮೆರವಣಿಗೆಯು ನಗರದ ಪ್ರಮುಖ ಬೀದಿಗಳ ಮೂಲಕ ಶ್ರೀ ರಂಭಾಪುರಿ ಜ. ವೀರಗಂಗಾಧರ ಸಮುದಾಯ ಭವನದವರೆಗೆ ಅದ್ದೂರಿಯಾಗಿ ಜರುಗಿತು.

> ವೀರಶೈವ ಧರ್ಮ ಪುರಾತನವಾಗಿದ್ದು, ಸುಮಾರು 8ನೇ ಶತಮಾನಕ್ಕಿಂತಲೂ ಮೊದಲೇ ಈ ಧರ್ಮವಿದೆ. 12ನೇ ಶತಮಾನದಲ್ಲಿ ಬಂದ ಬಸವಣ್ಣನವರು ವೀರಶೈವ ಧರ್ಮಕ್ಕೆ ಮಾರುಹೋಗಿ ಗುರುಗಳಿಂದ ಮಂತ್ರದೀಕ್ಷೆ ಪಡೆದು ವೀರಶೈವ ಸಮಾಜ ಕಲ್ಯಾಣಕ್ಕೆ ಶ್ರಮಿಸಿದರು. ಜ.ರೇಣುಕಾಚಾರ್ಯರ ಜಯಂತಿ ಆಚರಣೆಗೆ ಸಮಾಜ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಒಗ್ಗೂಡಿ ಕಾರ್ಯಕ್ರಮ ಮಾಡಬೇಕು.
>
> **- ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯ ಮಹಾಸ್ವಾಮಿಗಳು.**

## ಸಂಪಾದಕೀಯ

# ಸಿಎಂ ಸಿದ್ದರಾಮಯ್ಯ ವರ್ತನೆಗೆ ವ್ಯಾಪಕ ಖಂಡನೆ

ಬೆಳಗಾವಿಯ ಕಾಂಗ್ರೆಸ್ ಸಮಾವೇಶದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಪೊಲೀಸ್ ಅಧಿಕಾರಿಯೊಬ್ಬರ ಮೇಲೆ ಕೋಪಗೊಂಡ ಘಟನೆ, ರಾಜ್ಯ ರಾಜಕೀಯದಲ್ಲಿ ಸಂಚಲನ ಮೂಡಿಸಿದೆ. ವೇದಿಕೆಯ ಮೇಲೆಯೇ ಪೊಲೀಸ್ ಅಧಿಕಾರಿಯತ್ತ ಕೈ ಎತ್ತಿ ಆಕ್ರೋಶ ವ್ಯಕ್ತಪಡಿಸಿದ ಸಿಎಂ ಅವರ ವರ್ತನೆ, ಅಧಿಕಾರದ ದರ್ಪದ ಪ್ರದರ್ಶನವೆಂದು ವಿರೋಧ ಪಕ್ಷಗಳು ಟೀಕಿಸಿವೆ. ಸಾಮಾಜಿಕ ಜಾಲತಾಣಗಳಲ್ಲಿಯೂ ಈ ಘಟನೆಗೆ ಸಂಬಂಧಿಸಿದ ವಿಡಿಯೋಗಳು ವ್ಯಾಪಕವಾಗಿ ಹರಿದಾಡುತ್ತಿದ್ದು, ಸಾರ್ವಜನಿಕ ವಲಯದಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿದೆ.

ಸಮಾವೇಶದಲ್ಲಿ ಪ್ರತಿಭಟನೆಗಳು ನಡೆದ ಕಾರಣ ಗದ್ದಲ ಉಂಟಾದಾಗ, ಸಿಎಂ ಅವರು ಗರಂ ಆದರು. ಆದರೆ, ವೇದಿಕೆಯ ಮೇಲೆಯೇ ಪೊಲೀಸ್ ಅಧಿಕಾರಿಯ ಮೇಲೆ ಆಕ್ರೋಶ ವ್ಯಕ್ತಪಡಿಸಿದ ಅವರ ವರ್ತನೆ, ಸಾರ್ವಜನಿಕವಾಗಿ ಆಕ್ಷೇಪಾರ್ಹವಾಗಿದೆ. ಈ ಘಟನೆಯು, ಸಿಎಂ ಅವರ ವರ್ತನೆ ಮತ್ತು ಅಧಿಕಾರದ ದುರ್ಬಳಕೆಯ ಬಗ್ಗೆ ಪ್ರಶ್ನೆಗಳನ್ನು ಹುಟ್ಟುಹಾಕಿದೆ. ಪೊಲೀಸ್ ಅಧಿಕಾರಿಗಳ ಮೇಲಿನ ಒತ್ತಡ ಮತ್ತು ಅವರ ಕರ್ತವ್ಯ ನಿರ್ವಹಣೆಯ ಬಗ್ಗೆಯೂ ಇದು ಬೆಳಕು ಚೆಲ್ಲಿದೆ. ವಿರೋಧ ಪಕ್ಷಗಳು ಈ ಘಟನೆಯನ್ನು ತೀವ್ರವಾಗಿ ಖಂಡಿಸಿದ್ದು, ಅಧಿಕಾರದ ಮದದಲ್ಲಿ ಸಿಎಂ ವರ್ತಿಸಿದ್ದಾರೆ ಎಂದು ಆರೋಪಿಸಿವೆ. ಪೊಲೀಸ್ ಅಧಿಕಾರಿಗಳಿಗೆ ಅವಮಾನ ಮಾಡಲಾಗಿದೆ ಎಂದು ಟೀಕಿಸಿವೆ. ಸಾಮಾಜಿಕ ಮಾಧ್ಯಮಗಳಲ್ಲಿಯೂ ಸಿಎಂ ಅವರ ವರ್ತನೆಗೆ ಮಿಶ್ರ ಪ್ರತಿಕ್ರಿಯೆಗಳು ವ್ಯಕ್ತವಾಗಿವೆ. ಕೆಲವರು ಸಿಎಂ ಅವರ ನಡವಳಿಕೆಯನ್ನು ಖಂಡಿಸಿದರೆ, ಇನ್ನು ಕೆಲವರು ಸಮರ್ಥಿಸಿಕೊಂಡಿದ್ದಾರೆ. ಸಿಎಂ ಸಿದ್ದರಾಮಯ್ಯನವರ ಹಿಂದಿನ ವರ್ತನೆಗಳನ್ನು ಗಮನಿಸಿದರೆ, ಇಂಥ ಘಟನೆಗಳು ಮರುಕಳಿಸುವುದು ದುರದೃಷ್ಟಕರ. ಸಾರ್ವಜನಿಕ ಜೀವನದಲ್ಲಿರುವವರು ತಮ್ಮ ವರ್ತನೆಯಲ್ಲಿ ಸಂಯಮ ಮತ್ತು ಗೌರವವನ್ನು ಕಾಪಾಡಿಕೊಳ್ಳುವುದು ಅತ್ಯಗತ್ಯ. ರಾಜಕೀಯ ನಾಯಕರು ಸಾರ್ವಜನಿಕವಾಗಿ ವರ್ತಿಸುವಾಗ ಎಚ್ಚರಿಕೆ ವಹಿಸುವುದು ಅಗತ್ಯ. ಅಲ್ಲದೇ ಈ ಘಟನೆ ಪೊಲೀಸ್ ಇಲಾಖೆಯಲ್ಲಿನ ನೈತಿಕ ಸ್ಥೈರ್ಯದ ಮೇಲೆ ಪರಿಣಾಮ ಬೀರಬಹುದು. ಮುಂದಿನ ದಿನಗಳಲ್ಲಿ ಸಾರ್ವಜನಿಕವಾಗಿ ನಾಯಕರು ವರ್ತಿಸುವಾಗ ಎಚ್ಚರಿಕೆ ವಹಿಸುವಂತೆ ಮಾಡಬಹುದು.

ಮುಖ್ಯಮಂತ್ರಿ ಸಿದ್ದರಾಮಯ್ಯನವರ ಈ ನಡವಳಿಕೆಯು ಖಂಡನೀಯ. ಸಾರ್ವಜನಿಕ ಸೇವೆಯಲ್ಲಿರುವವರು ತಮ್ಮ ಜವಾಬ್ದಾರಿಗಳನ್ನು ಅರಿತು ವರ್ತಿಸುವುದು ಅತ್ಯಗತ್ಯ. ಈ ಘಟನೆಯು ರಾಜಕೀಯ ನಾಯಕರು ಮತ್ತು ಅಧಿಕಾರಿಗಳು ತಮ್ಮ ಜವಾಬ್ದಾರಿಗಳನ್ನು ಅರಿತು ವರ್ತಿಸುವಂತೆ ಎಚ್ಚರಿಸುವಂತಿರಬೇಕು.

## ನಾಳೆ ನಡೆಯುವ ಬಸವ ಜಯಂತಿ, ಶ್ರೀ ಗಂಜಿ ಬಸವೇಶ್ವರ ಜಾತ್ರಾ ಮಹೋತ್ಸವದ ನಿಮಿತ್ತ ಲೇಖನ

# 'ಗಂಜಿ'ಯಾದ ಗಂಜಿ ಬಸವಣ್ಣ

ಗದಗ ಅನೇಕ ವೈಶಿಷ್ಟ್ಯಗಳಿಂದ ಕೂಡಿದ ಸಾಂಸ್ಕೃತಿಕ ನಗರ. ಅನೇಕ ಕವಿ ಪುಂಗವರು, ಮಹಾಮಹಿಮರು, ಕಲಾವಿದರು ಜನಿಸಿ ಆಯಾ ಕ್ಷೇತ್ರಗಳಲ್ಲಿ ತಮ್ಮತನ ಮೆರೆದ ಸ್ಥಳವಾಗಿದ್ದು, ಅನೇಕ ದೇವಾಲಯಗಳಿಂದ ಕಂಗೊಳಿಸುತ್ತಿದೆ. ಶ್ರೀ ತೋಂಟದಾರ್ಯ ಮಠ, ಶ್ರೀ ಪಂಚಾಕ್ಷರಿ ಗವಾಯಿಗಳವರ ಮಠ, ಶ್ರೀ ಶಿವಾನಂದ ಮಠ, ಶ್ರೀ ತ್ರಿಕೂಟೇಶ್ವರ, ಶ್ರೀ ವೀರನಾರಾಯಣ ದೇವಸ್ಥಾನ ಹೀಗೆ ಅನೇಕ ಮಠಮಾನ್ಯಗಳಿಂದ ಕೂಡಿದ್ದು ನಗರದಲ್ಲಿ ನೂರಾರು ಜಾತ್ರೋತ್ಸವಗಳು, ಜಯಂತಿಗಳು, ಧಾರ್ಮಿಕ ಸಭೆ ಸಮಾರಂಭಗಳು, ನಮ್ಮ ಸಂಸ್ಕೃತಿ-ಸಂಪ್ರದಾಯಗಳ ಅರಿವನ್ನು ಮೂಡಿಸುವ, ಸಮಾಜದಲ್ಲಿ ಶಾಂತಿ ಸುಭಿಕ್ಷೆಯನ್ನು ಪಸರಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿವೆ. ಇಂತಹ ಅನೇಕ ಸಂಪ್ರದಾಯಯುತ ಜಾತ್ರೆಗಳಲ್ಲಿ ನಗರದ ಉಸುಗಿಗಟ್ಟಿ ಓಣಿಯ ಶ್ರೀ ಗಂಜಿ ಬಸವೇಶ್ವರ ಜಾತ್ರೆಯೂ ಸಹ 63 ವರ್ಷಗಳಿಂದಲೂ ತನ್ನ ಪರಂಪರೆಯನ್ನು ಕಾಯ್ದುಕೊಂಡು ಬಂದಿದೆ.

ಸಂಪ್ರದಾಯ-ಸಂಸ್ಕೃತಿ ಮಾನವನ ಸ್ಮೃತಿ ಎನ್ನುವಂತೆ ಈಗ ಶ್ರೀ ಗಂಜಿ ಬಸವೇಶ್ವರ ನೆಲೆಸಿರುವ ಸ್ಥಳದಲ್ಲಿ ನೂರಾರು ವರ್ಷಗಳ ಹಿಂದೆ ಹಳ್ಳವೊಂದು ಹರಿಯುತ್ತಿತ್ತು. ಪೂರ್ಣ ಜಲಾವರಣಗೊಂಡ ಈ ಪ್ರದೇಶವೆಲ್ಲ ಉಸುಗಿನಿಂದ ಕೂಡಿತ್ತು. ಅಲ್ಲಲ್ಲಿ ಗಂಜಿ ಪಾಳ್ಯಗಳಿದ್ದು, ಉಸುಗಿನ ಹಳ್ಳವೆಂದೇ ಕರೆಯುತ್ತಿದ್ದರಂತೆ. ಈ ಹಳ್ಳವು ಮುಂದೆ ಹಂದಿಗೋಳ ಅಂದರೆ ಗಂಗಿಮಡಿ ರಸ್ತೆಗುಂಟ ಹರಿಯುತ್ತ ಅಲ್ಲಿರುವ



ಹಳ್ಳವನ್ನು ಸೇರುತ್ತಿತ್ತಂತೆ. ಅಲ್ಲಿ ಅಗಸರೇ ಬೀಡು ಬಿಟ್ಟಿದ್ದು, ಆ ಪ್ರದೇಶವನ್ನು ಅಗಸನಹಳ್ಳಿ ಎಂದು ಕರೆಯುತ್ತಿದ್ದರಂತೆ.

ಆದರೆ ಒಂದು ದಿನ ಈ ಪ್ರದೇಶದಲ್ಲಿರುವ ಗಂಗಮ್ಮ ಎಂಬ ಮಹಾಸಾಧ್ವಿಯು ತನ್ನ ಮಾನರಕ್ಷಣೆಗಾಗಿ ಈ ಹಳ್ಳದಲ್ಲಿ ಹಾರಿ ಮಡಿದಳಂತೆ. ಹಾಗಾಗಿ ಅಂದಿನಿಂದ ಈ ಪ್ರದೇಶವನ್ನು ಗಂಗಿಮಡಿ ಎಂದೇ ಕರೆಯುತ್ತ ಬಂದರು. ತದನಂತರ ಅಲ್ಲಿದ್ದ ಅಗಸ ಜನ ಬೇರೆಡೆ ವಲಸೆ ಹೋದರಂತೆ. ಅದರಂತೆ ಈ ಹಳ್ಳವನ್ನು ಕೂಡುತ್ತಿದ್ದ, ಸಧ್ಯಕ್ಕೆ ನಾವಿರುವ ಈ ಉಸುಕಿನ ಹಳ್ಳದಲ್ಲಿ ಆಗ ಅಕಸ್ಮಾತ್ ಒಂದು ದಿನ ಗಂಜಿ ಹಾಕುತ್ತಿದ್ದ ಅಗಸನೋರ್ವನಿಗೆ ನಂದಿ ವಿಗ್ರಹವೊಂದು ದೊರಕಿತು. ಅಗಾಧವಾದ ಈ ವಿಗ್ರಹವನ್ನು ಕಂಡು ಮುಗ್ದಜೀವಿ ಅಗಸನು ತನ್ನದೇ ಆದ ಗ್ರಾಮ್ಯ ಭಾಷೆಯಲ್ಲಿ ಭಾವೋನ್ಮತ್ತನಾಗಿ ಹಳ್ಳದ ಜನರೆಲ್ಲರನ್ನೂ ಕೂಗಿ ಕೂಗಿ ಕರೆದು ವಿಗ್ರಹ ದೊರೆತ ಸುದ್ದಿಯನ್ನು ಎಲ್ಲ ಕಡೆಗೂ ಪಸರಿಸಿದ. ನಂದಿ ವಿಗ್ರಹ ಕಂಡು ಪುಳಕಿತಗೊಂಡ ಇಲ್ಲಿನ ಸಾಮಾನ್ಯ ಜನ, ಅಸಾಮಾನ್ಯವಾದ ಈ ಮೂರ್ತಿಯನ್ನು ತಂದು ಪ್ರತಿಷ್ಠಾಪಿಸಿ, ಪೂಜಿಸಿ ಬಸವಭಕ್ತರಾದರು. ಅಂದಿನಿಂದ ಈ ಬಸವಣ್ಣ ಉಸುಕಿನ ಹಳ್ಳದ ಸ್ಥಳದಲ್ಲಿ ಉಕ್ಕಿನ ಬುನಾದಿಯನ್ನೇ ಹಾಕಿ ನೆಲೆನಿಂತ.

ಗಂಜಿ ಹಾಕುವವರಿಗೆ ದೊರೆತ ಈ ಬಸವಣ್ಣ ಗಂಜೀ ಬಸವಣ್ಣನೆಂದು ಪ್ರಭಾವಳಿಗೊಂಡನು. ತನ್ನ ನಂಬಿದ ಭಕ್ತರಿಗೆ ಸಾಕಷ್ಟು ಗಂಜಿ ನೀಡುತ್ತಾನೆ ಎಂದು ಜನ ಭಕ್ತಿ ಭಾವ ಮೆರೆದರು. ಈ ಉಸುಕಿನ ಹಳ್ಳದಲ್ಲಿ ವಾಸಿಸುವ ಜನ ಪ್ರದೇಶವನ್ನು ಉಸುಗಿನಗಟ್ಟಿ ಎಂದೇ ಕರೆಯುತ್ತಾ ಬಂದರು.

ಸಣ್ಣ ಮಗುವಿನಿಂದ ಹಿಡಿದು ವೃದ್ಧರವರೆಗೂ ಹಳ್ಳದ ಈ ಬಸವನನ್ನು ಅರಾಧಿಸುತ್ತ ಬಂದರು. ಈಗಲೂ ಪ್ರತಿ ಸೋಮವಾರಕ್ಕೊಮ್ಮೆ ನಗರದ ಅನೇಕ ಕಡೆಗಳಿಂದ ಹಾಗೂ ವಿವಿಧ ಹಳ್ಳಿಗಳಿಂದ ನೂರಾರು ಜನ ಬಂದು ಬಸವಣ್ಣನನ್ನು ಆರಾಧಿಸುತ್ತಾರೆ. ಕಾಯಕಯವೇ ಕೈಲಾಸವೆಂದು ಬಸವನನ್ನು ನಂಬಿ ದುಡಿಯುವ ರೈತರಂತೂ ಶ್ರೀ ಗಂಜಿ ಬಸವನನ್ನು ಪೂಜಿಸಿದರೇನೇ ನಮಗೆ ಈ ವರ್ಷ ಸಾಕಷ್ಟು ಗಂಜಿ ಕೊಡುತ್ತಾನೆ ಎಂದು ನೂರಾರು ವರ್ಷಗಳಿಂದಲೂ ನಂಬಿಕೊಂಡು ಬಂದಿದ್ದಾರೆ.

ರೈತರು ಒಂದಡೆ ಸೇರಿ ಬಿಡುವಿನ ವೇಳೆಯಲ್ಲಿ ಈ ಗಂಜಿ ಬಸವಣ್ಣನನ್ನು ಆರಾಧಸುತ್ತಾ ಪ್ರತಿ ವರ್ಷಕ್ಕೊಮ್ಮೆ ಒಂದು ಬೃಹತ್ ಉತ್ಸವದಂತೆ ಆಚರಿಸುತ್ತಾ ಆಚರಿಸುತ್ತಾ ರಥೋತ್ಸವ ಎಂಬ ಸಂಪ್ರದಾಯವನ್ನು ರೂಢಿಸಿಕೊಂಡು ಬಂದು ಇಂದಿಗೆ 33 ವರ್ಷಗಳು ಸಂದಿವೆ. ಕೆಲವೇ ಕೆಲವು ನಿರ್ದಿಷ್ಟ ಭಕ್ತರಿಂದ ಕೂಡಿದ್ದ ಈ ರಥೋತ್ಸವವು ಇಂದು ಸಾವಿರಾರು ಭಕ್ತಾಧಿಗಳಿಂದ ನಮ್ಮೂರ ರಥೋತ್ಸವ ಎಂದು ಜರುಗುತ್ತಿದೆ. ಆರ್ಥಿಕವಾಗಿ ಜನರು ಅಂದು ವಿಚಾರಿಸುತ್ತಲೇ ಇರಲಿಲ್ಲ. ಗಂಜೀ ಬಸವನ ರಥೋತ್ಸವದ ತೇ-ೀರು ಕಟ್ಟಲು ಬಂದವರಿಗೆ, ಡೊಳ್ಳು ಮೋಜಿನವರಿಗೆ, ಪರ ಊರಿನಿಂದ ಬಂದ ಭಕ್ತರಿಗೆ ತಮ್ಮ ಮನೆಯಲ್ಲಿದ್ದ ಗಂಜಿಯನ್ನು ಉಣಬಡಿಸಿ ತಾವೇ ಉಂಡಷ್ಟು ಸಂತೃಪ್ತಗೊಳ್ಳುತ್ತಿದ್ದರಂತೆ. ಜಾತ್ರೆಯ ದಿನವಂತೂ ಇವರಿಗೆ ಬಿಸಿ ಬಿಸಿ ಹೋಳಿಗೆ, ಮೋದಕ ಉಣಬಡಿಸುತ್ತಿದ್ದಂತೆ. ಗಂಜಿ ಬಸವನ ಭಕ್ತರಿಗೆ ಗಂಜಿ ನೀಡಿದರೆ ನಮ್ಮ ಮನೆಯಲ್ಲಿ ಗಂಜಿಗೆ ಬರವಿಲ್ಲವೆಂದು ಜನ ಈಗಲೂ ನಂಬಿಕೊಂಡು ಬಂದಿದ್ದಾರೆ. ಜಾತ್ರೆಯೆಂದರೆ ಕೇವಲ ಹೂವು, ಹಣ್ಣು-ಕಾಯಿ ಏರಿಸುವುದಷ್ಟೇ ಅಲ್ಲ, ಅಂದು ಹುರುಪಿನ ದೇಹ ಮತ್ತು ಮನಸ್ಸಿಗೆ ಹೊಸ ನಗುವಿನ ಬಟ್ಟೆ ಧರಿಸಿ ಬಂಧು-ಬಳಗ ಕರೆಯಿಸಿ ಗಂಜೀ ಬಸವನಿಗೆ ಹೂಕಾಯಿ ಅರ್ಪಿಸಿ ಕೂಡಿ ಉಣ್ಣುವ ಒಂದು ದೊಡ್ಡ ಸಡಗರದ ಹಬ್ಬವಿದು ಎಂದು ಭಕ್ತರು ಭಾವುಕರಾಗಿ ಆಚರಿಸುತ್ತಾರೆ. ಬರಬರುತ್ತಾ ಈ ಜಾತ್ರೆ ಮಾಡಿದರಷ್ಟೇ ಸಾಲದು, ಶರಣ ಶರಣೆಯರ ವಚನ ಪಠ ನಡೆಯಬೇಕು, ಅನ್ನದಾಸೋಹ ಹಾಗೂ ಅನೇಕ ಸಾಂಸ್ಕೃತಿಕ ಕಾರ್ಯಕ್ರಮ ನಡೆಸಬೇಕೆಂದು ಇಲ್ಲಿಯ ಜನ ಜಾತ್ರೆಗೆ ಮುಂಚೆ ಆರು ದಿನಗಳ ಕಾರ್ಯಕ್ರಮ ನಡೆಸಲು ತೀರ್ಮಾನಿಸಿದರು. ಅದು ಇಂದಿಗೂ ನಡೆದುಕೊಂಡು ಬಂದಿದ್ದು ಸುತ್ತ್ಯಾರ್ಹ. ಹೊಟ್ಟೆಗೆ ಗಂಜೀ ನೀಡುವ ಬಸವಣ್ಣ ಇಂದು ಎಲ್ಲರ ನೆತ್ತಿಗೂ ಜ್ಞಾನದ ಗಂಜಿಯನ್ನು ನೀಡುತ್ತಿದ್ದಾನೆ ಎಂದು ನಂಬಿಕೊಂಡು ಬಂದರು. ಜೊತೆಗೆ ವಿಶ್ವಗುರು ಬಸವಣ್ಣನವರ ಮತ್ತು ಜ. ಏಕೋರಾಮರಾಧ್ಯರ ಜಯಂತಿಯನ್ನೂ ಸಹ ಭಾವಚಿತ್ರಗಳೊಂದಿಗೆ ನಗರದ ಪ್ರಮುಖ ಬೀದಿಗಳಲ್ಲಿ ನೂರಾರು ಜೋಡಿ ಎತ್ತುಗಳ ಶೃಂಗಾರದೊಂದಿಗೆ ಮೆರವಣಿಗೆ ಮಾಡುವುದರ ಮೂಲಕ ಜನಪದ ಕಲಾಮೇಳಗಳ ಆಂದೋಲಿಕೋತ್ಸವವನ್ನು ಹಮ್ಮಿಕೊಳ್ಳುತ್ತಾ ಬಂದರು.

ಕೆಲವೇ ಕೆಲವು ಭಕ್ತರಿಂದ ಕೂಡಿದ್ದ ಗಂಜೀ ಬಸವಣ್ಣನ ಆರಾಧನೆ ಇಂದು ಎಣಿಕೆಗೆ ಬಾರದಷ್ಟು ಬಹು ವಿಜೃಂಭಣೆಯಿಂದ ನಡೆಯುತ್ತಿದೆ. ಸಾವಿರಾರು ಭಕ್ತಮಣಿಗಳ ದೇಣಿಗೆಯಿಂದ ದೇವಸ್ಥಾನದ ಗೋಪುರ ನಿರ್ಮಾಣ ಮತ್ತು ಬಸವಣ್ಣ ಮೂರ್ತಿಯನ್ನು ದೇವಸ್ಥಾನದ ಮೇಲೆ ಪ್ರತಿಷ್ಠಾಪಿಸಿ ಇಡೀ ದೇವಸ್ಥಾನದ ಜೀರ್ಣೋದ್ದಾರ ಕಾರ್ಯವನ್ನು ಮಾಡಿಸಿದ್ದು ಗಂಜೀ ಬಸವಣ್ಣನ ಮಹಿಮೆಯೇ ಸರಿ. ಹೀಗೆ ಗಂಜಿ ಬಸವಣ್ಣ ತನ್ನ ಮಹಿಮೆಯಿಂದ ಇಂದು ಉಸುಗಿನ ಹಳ್ಳವನ್ನು ಉಸುಗಿನಗಟ್ಟಿ ಓಣಿ ಎಂದು ಸೊಗಸಾಗಿ ಪರಿವರ್ತಿಸಿ ಗದಗ ನಗರದಲ್ಲಿ ಪ್ರಮುಖವಾದ ಹಿರಿಮೆಯನ್ನು ಅಭಯಹಸ್ತವನ್ನಾಗಿ ನೀಡಿದ್ದಾನೆ. ಇಂದು ಈ ಬಸವನ ಜಾತ್ರೆಯು ನಮ್ಮೂರ ರಥೋತ್ಸವ ಹೆಸರಿನಿಂದ ಹೊಳೆಯುತ್ತಿದೆ. ಇಂತಹ ಗಂಜಿ ನೀಡುವ ಬಸವಯ್ಯನ ಜಾತ್ರೆಗೆ ತಮಗೆಲ್ಲರಿಗೂ ಭಕ್ತಿಪೂರ್ವಕ ಸ್ವಾಗತ.

– ಜಿ.ಬಿ.ಹಾವಣಗಿ, ಗದಗ.

## ಸರಕಾರಿ ಪ್ರಥಮ ದರ್ಜೆ ಕಾಲೇಜಿಗೆ ನಿರ್ದೇಶಕರ ಭೇಟಿ

# ಕಾಲೇಜಿನ ಶಿಸ್ತು, ಸಾಧನೆಗೆ ನಿರ್ದೇಶಕರ ಪ್ರಶಂಸೆ



■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿಗೆ ಸೋಮವಾರ ಕಾಲೇಜು ಶಿಕ್ಷಣ ಇಲಾಖೆಯ ನಿರ್ದೇಶಕರಾದ ಪ್ರೊ.ಶೋಭಾ.ಜಿ. ಭೇಟಿ ನೀಡಿ, ಗುಣಮಟ್ಟದ ಬೋಧನೆಯ ದಾಖಲಾತಿಗಳನ್ನು ಪರಿಶೀಲಿಸಿ ಕಾಲೇಜಿನ ಶಿಸ್ತು, ಸಾಧನೆಯನ್ನು ಪ್ರಶಂಸಿಸಿದರು.

ಕಾಲೇಜಿನ ಕಾಯಂ ಬೋಧಕರ, ಅತಿಥಿ ಉಪನ್ಯಾಸಕರ ಹಾಗೂ ಬೋಧಕೇತರ ಸಿಬ್ಬಂದಿ ಜೊತೆ ಮಾತನಾಡಿ ಅವರ ಸಮಸ್ಯೆಗಳನ್ನು ಆಲಿಸಿದರು. ಸಮಸ್ಯೆ ನಿವಾರಣೋಪಾಯಗಳನ್ನು ಚರ್ಚಿಸಿ ಯಾವುದೇ ತೊಂದರೆ ಆಗದಂತೆ ಕ್ರಮ ವಹಿಸುವ ಭರವಸೆ ನೀಡಿದರು.

ಕಾಲೇಜಿನ ಪ್ರಯೋಗಾಲಯ, ತರಗತಿ ಕೋಣೆ, ಜಿಮ್, ಕಾಲೇಜಿನ ಸಾಂಸ್ಕೃತಿಕ ಚಟುವಟಿಕೆ, ವಿವಿಧ ವಿಭಾಗಗಳ ವಿದ್ಯಾರ್ಥಿಗಳ ಸಾಧನೆಯ ಅಂಶಗಳು, ಮತ್ತಿತರ ವ್ಯವಸ್ಥೆಗಳನ್ನು ಪರಿಶೀಲಿಸಿ ಹರ್ಷ ವ್ಯಕ್ತಪಡಿಸಿದರು.

ಈ ವೇಳೆ ಪ್ರಾಂಶುಪಾಲ ಡಾ.ಡಿ.ಎಚ್.ನಾಯಕ್ ಸೇರಿದಂತೆ ಕಾಲೇಜಿನ ವಿವಿಧ ವಿಭಾಗಗಳ ಬೋಧಕ ಸಿಬ್ಬಂದಿ, ಬೋಧಕೇತರ ಸಿಬ್ಬಂದಿ ಇದ್ದರು.



# ಜನಮನ ಸೂರೆಗೊಂಡ 'ಬೇಂದ್ರೆ ದರ್ಶನ'

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಬಾಲಕೃಷ್ಣ ಸಾಹಿತ್ಯ ವೇದಿಕೆಯ ಆಶ್ರಯದಲ್ಲಿ ನಡೆದ ಸಮಾರಂಭದಲ್ಲಿ ಕಲಾವಿದ ಅನಂತ ದೇಶಪಾಂಡೆ 2025ರ ಬಾಲಕೃಷ್ಣ ಸಾಹಿತ್ಯ ಪುರಸ್ಕಾರ ಪಡೆದರು. ನಂತರ ಅವರು ನೀಡಿದ ಬೇಂದ್ರೆ ದರ್ಶನ ಕಾರ್ಯಕ್ರಮ ನೆರೆದವರ ಮನವನ್ನು ಸೂರೆಗೊಂಡಿತು.

ಬೇಂದ್ರೆಯವರಂತೆಯೆ ವೇಷಭೂಷಣ ತೊಟ್ಟು ದೇಶಪಾಂಡೆ ಸಭಾಂಗಣಕ್ಕೆ ಆಗಮಿಸಿದಾಗ ನೆರೆದವರು ಆನಂದದಿಂದ ಚಪ್ಪಾಳೆ ತಟ್ಟಿದರು. ಬೇಂದ್ರೆಯವರ ಹಾವ-ಭಾವ, ನಡೆ-ನುಡಿಗಳನ್ನು ತಮ್ಮ ಭಾಷಣದುದ್ದಕ್ಕೂ ಪ್ರದರ್ಶಿಸಿದ ದೇಶಪಾಂಡೆ ಸ್ವತಃ ಬೇಂದ್ರೆಯವರೇ ತಮ್ಮೆದುರಿಗೆ ಬಂದು ನಿಂತಿದ್ದಾರೇನೋ



ಎನ್ನುವಂತಹ ವಾತಾವರಣ ಸೃಷ್ಟಿಸುವಲ್ಲಿ ಯಶಸ್ವಿಯಾದರು.

ಬೇಂದ್ರೆಗೆ ನಾಲ್ಕು ಮುಖಗಳಿದ್ದವು. ಕವಿ ಬೇಂದ್ರೆ, ವಿಮರ್ಶಕ ಬೇಂದ್ರೆ, ಮಾಸ್ತರ ಬೇಂದ್ರೆ ಮತ್ತು ಗೃಹಸ್ಥ ಬೇಂದ್ರೆ. ಈ ಎಲ್ಲದರಲ್ಲಿಯೂ ಬೇಂದ್ರೆ ತಮ್ಮ ಛಾಪನ್ನು ಮೂಡಿಸಿ ತಮ್ಮ ಜೀವನವನ್ನು ಹೇಗೆ ಸಾರ್ಥಕಪಡಿಸಿಕೊಂಡರು ಎಂಬುದನ್ನು ದೇಶಪಾಂಡೆ ತಮ್ಮ ಅಭಿನಯದ ಮೂಲಕ ಅಭಿನಯಿಸಿ ಎಲ್ಲರ ಮನ ಗೆದ್ದರು. ಗದಗಿನ ವಿದ್ಯಾದಾನ ಸಮಿತಿಗೆ ತಾವು ಮಾಸ್ತರರಾಗಿ ಬಂದ ಅನುಭವವನ್ನು, ತಮ್ಮ ಕವಿತೆಗಳು ಅರಳಿದ ವಿಷಯವನ್ನು ಅವರು ನಿರೂಪಿಸಿದರು.

ಬೆಳಗಾವಿ ಸಾಹಿತ್ಯ ಸಮ್ಮೇಳನದಲ್ಲಿ ತಾವು ಓದಿದ ಕವಿತೆ 'ಹಕ್ಕಿ ಹಾರುತಿದೆ ನೋಡಿದಿರಾ' ಗೀತೆಯನ್ನು ರಾಗಬದ್ಧವಾಗಿ ಹಾಡಿದರು. ಸಮಾರಂಭದ ದಿವ್ಯ ಸಾನ್ನಿಧ್ಯ ವಹಿಸಿದ್ದ ಶ್ರೀ ಮುಪ್ಪಿನ ಬಸವಲಿಂಗ ಸ್ವಾಮೀಜಿಗಳನ್ನೊಳಗೊಂಡಂತೆ ವೇದಿಕೆಯ ಮೇಲಿನ ಗಣ್ಯರು, ನೂರಾರು ಸಾಹಿತ್ಯಾಸಕ್ತರು ಪಾಲ್ಗೊಂಡು ಬೇಂದ್ರೆ ದರ್ಶನದ ಸವಿಯನ್ನು ಸವಿದರು.

# ಭಯೋತ್ಪಾದಕರ ದಾಳಿ ಖಂಡಿಸಿ ಪಂಜಿನ ಮೆರವಣಿಗೆ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಇತ್ತೀಚೆಗೆ ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ಉಗ್ರರು ನಡೆಸಿದ ಹೇಯ ಕೃತ್ಯವನ್ನು ಖಂಡಿಸಿ ಪಟ್ಟಣದ ಶ್ರೀ ಅಂಭಾಭವಾನಿ ದೇವಸ್ಥಾನದಿಂದ ಪ್ರಮುಖ ವೃತ್ತಗಳಲ್ಲಿ ಸಾವಿರಾರು ಹಿಂದೂ ಕಾರ್ಯಕರ್ತರು ಸೋಮವಾರ ರಾತ್ರಿ ಪಂಜಿನ ಮೆರವಣಿಗೆ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ, ನಾಗರಾಜ ಲಕ್ಕುಂಡಿ, ಸಂತೋಷ ಕುರಿ, ಫಕ್ಕೀರೇಶ ರಟ್ಟಿಹಳ್ಳಿ ಮುಂತಾದವರು, ಎಲ್ಲ ಜಾತಿ, ಧರ್ಮದವರು ಒಗ್ಗಟ್ಟಾಗಿರುವ ನಮ್ಮ ದೇಶ ವಿಭಜನೆಯಾಗಬೇಕು ಎಂಬ ಹುನ್ನಾರ ಇಟ್ಟುಕೊಂಡು ಮಾಡಿರುವ ಭಯೋತ್ಪಾದಕರ ದಾಳಿಯನ್ನು ನಾವೆಲ್ಲರೂ ಏಕತೆಯಿಂದ, ಒಗ್ಗಟ್ಟಿನಿಂದ ಖಂಡಿಸಬೇಕೆಂದರು.

ಚಂದ್ರಕಾಂತ ನೂರಶೆಟ್ಟರ, ನಟರಾಜ ರಾನಡೆ, ಪರಶುರಾಮ ಡೊಂಕಬಳ್ಳಿ, ಯಲ್ಲಪ್ಪ ಇಂಗಳಗಿ, ಆನಂದ ಸೊರಟೂರ, ಶರಣು ಹೊಸೂರ, ರಾಮಣ್ಣ ಕಂಬಳಿ, ಮಹಾಂತೇಶ ದಶಮನಿ, ಬಸವರಾಜ ತುಳಿ ಮುಂತಾದವರು ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು. ಪಿಎಸ್‌ಐ ಚನ್ನಯ್ಯ ದೇವೂರ ಮತ್ತು ಸಿಬ್ಬಂದಿಗಳು ಅಗತ್ಯ ಬಂದೋಬಸ್ತ್ ಕಲ್ಪಿಸಿದರು.

# ಕಣ್ಣಿನ ಆಸ್ಪತ್ರೆ ಉದ್ಘಾಟನೆ ಇಂದು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಖ್ಯಾತ ನೇತ್ರ ತಜ್ಞ ಡಾ. ಎಂ.ಎಂ. ಜೋಶಿ ನೇತ್ರ ವಿಜ್ಞಾನ ಸಂಸ್ಥೆ ಹಾಗೂ ಎಸ್.ಜಿ.ಎಂ ನೇತ್ರ ಭಂಡಾರ ಹಾಗೂ ಸಂಶೋಧನಾ ಪ್ರತಿಷ್ಠಾನದ ವತಿಯಿಂದ ಕಣ್ಣಿನ ಆಸ್ಪತ್ರೆಯು ಪಟ್ಟಣದ ಶ್ರೀ ಫಕೀರಸ್ವಾಮಿ ಮಠದ ಮಳಿಗೆಯಲ್ಲಿ ಎ.29 ರಂದು ಉದ್ಘಾಟನೆಗೊಳ್ಳಲಿದೆ.

ಶಿರಹಟ್ಟಿ ಸಂಸ್ಥಾನಮಠದ ಜ.ಶ್ರೀ ಫಕೀರ ಸಿದ್ಧರಾಮ ಮಹಾಸ್ವಾಮಿಗಳು ಉದ್ಘಾಟನೆಯನ್ನು ನೆರವೇರಿಸಲಿದ್ದು, ಖ್ಯಾತ ನೇತ್ರ ತಜ್ಞ, ಪದ್ಮಶ್ರೀ ಪುರಸ್ಕೃತ ಡಾ. ಎಂ.ಎಂ. ಜೋಶಿ ಆಗಮಿಸಲಿದ್ದಾರೆ. ಅತಿಥಿಗಳಾಗಿ ಉದ್ಯಮಿ ಮಹಾದೇವ ಕರಮರಿ, ಹುಬ್ಬಳ್ಳಿ ಆಯುರ್ವೇದ ಸೇವಾ ಸಮಿತಿ ಅಧ್ಯಕ್ಷ ಗೋವಿಂದ ಜೋಶಿ, ನಂದಕುಮಾರ ವೈ.ಎಸ್., ಶೇಖಗಿರಿ ಕುಲಕರ್ಣಿ ಸೇರಿದಂತೆ ಅನೇಕ ಮುಖಂಡರು, ಹಿರಿಯರು ಪಾಲ್ಗೊಳ್ಳಲಿದ್ದಾರೆ. ಉದ್ಘಾಟನೆಯ ನಿಮಿತ್ತ ಇದೇ ಆವರಣದಲ್ಲಿ ಉಚಿತ ನೇತ್ರ ತಪಾಸಣೆ ಹಾಗೂ ಉಚಿತ ಶಸ್ತ್ರಚಿಕಿತ್ಸೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಸಾರ್ವಜನಿಕರು ಈ ಶಿಬಿರದ ಲಾಭ ಪಡೆದುಕೊಳ್ಳಬೇಕೆಂದು ಎಂದು ಡಾ. ಎ.ಎಸ್. ಗುರುಪ್ರಸಾದ, ಡಾ. ಕೆ.ವಿ. ಸತ್ಯಮೂರ್ತಿ, ಡಾ. ಆರ್. ಕೃಷ್ಣಪ್ರಸಾದ, ಡಾ. ಶ್ರೀನಿವಾಸ ಜೋಶಿ ಮನವಿ ಮಾಡಿದ್ದಾರೆ.

# ಶ್ರೀ ಏಳು ಮಕ್ಕಳ ತಾಯಿ ದೇವಸ್ಥಾನ ನೂತನ ಗೋಪುರ ಕಳಸಾರೋಹಣ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶ್ರೀ ಏಳು ಮಕ್ಕಳ ತಾಯಿ ದೇವಸ್ಥಾನದ ನೂತನ ಗೋಪುರದ ಕಳಸಾರೋಹಣ, ದೇವಸ್ಥಾನದ ಜಾತ್ರಾ ಮಹೋತ್ಸವ ಮತ್ತು ಶ್ರೀ ಡೋಹರ್ ಕಕ್ಕಯ್ಯನವರ ಜಯಂತ್ಯುತ್ಸವದ ವಿವಿಧ ಧಾರ್ಮಿಕ ಕಾರ್ಯಗಳಿಗೆ ಸೋಮವಾರ ಚಾಲನೆ ನೀಡಲಾಯಿತು.

ಮುಂಜಾನೆ ದೇವಸ್ಥಾನದ ನೂತನ ಕಳಶವನ್ನು ಪಟ್ಟಣದ ಪೇಟೆ ಹಾವಳಿ ಹನುಮಂತದೇವರ ದೇವಸ್ಥಾನದಿಂದ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಕಲ




ವಾದ್ಯ ವೈಭವಗಳೊಂದಿಗೆ ಮೆರವಣಿಗೆಯ ಮೂಲಕ ತರಲಾಯಿತು. ಸಮಾಜದ ಯುವಕರು, ಹಿರಿಯರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಮೆರವಣಿಗೆಯ ಆಕರ್ಷಣೆ ಹೆಚ್ಚಿಸಿದ್ದರು. ನಂತರ ಕರೇವಾಡಿಮಠದ ಶ್ರೀ ಮಳೆ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮಿಗಳು ಕಳಸಾರೋಹಣ ನೆರವೇರಿಸಿ ಆಶೀರ್ವದಿಸಿದರು.

ಈ ಸಂದರ್ಭದಲ್ಲಿ ಶ್ರೀ ಏಳು ಮಕ್ಕಳ ತಾಯಿ ಭಕ್ತರ ಸೇವಾ ಟ್ರಸ್ಟ್ ಕಮಿಟಿ ಅಧ್ಯಕ್ಷ ಪೂರ್ಣಾಜಿ ಖರಾಟೆ, ಎನ್. ಆರ್. ಸಾತಪುತೆ, ಸತೀಶ ನಾರಾಯಣಕರ, ಲಕ್ಷ್ಮೀಕಾಂತ ಖರಾಟೆ, ಕಪ್ಪತ್‌ಸ್ವಾಮಿ ಕರಾಟೆ, ಮಂಜುನಾಥ ಗಜಾಕೋಶ, ರಾಜು ಖರಾಟೆ, ಮಂಜುನಾಥ ಕೆ.ಗಜಾಕೋಶ, ಕಿರಣ ಖರಾಟೆ, ಓಂಕಾರಪ್ಪ ಗಜಾಕೋಶ, ನಾಗೇಂದ್ರಪ್ಪ ಖರಾಟೆ, ಪುರಸಭೆ ಸದಸ್ಯೆ ಪೂಜಾ ಖರಾಟೆ, ಮಂಜವ್ವ ನಂದೆಣ್ಣವರ, ದೀಪಕ್ ಖರಾಟೆ, ಪ್ರವೀಣ ಗಜಾಕೋಶ, ಚಂದ್ರಶೇಖರ ಗಜಾಕೋಶ, ಗೀತಾ ಗಂಗಾಧರ ಕಂದಾರೆ, ರವಿ ಭೋರುಡೆ, ಫಕ್ಕೀರಪ್ಪ ನಾರಾಯಣಕರ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.

# ಇಂದು ಸರ್ವೋತ್ತಮ ಸೇವಾ ಪ್ರಶಸ್ತಿ ಪ್ರದಾನ ಸಮಾರಂಭ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಜಿಲ್ಲಾ ಶಾಖೆ, ಗದಗ ಇವರ ಸಂಯುಕ್ತ ಆಶ್ರಯದಲ್ಲಿ ರಾಜ್ಯ ಸರ್ಕಾರಿ ನೌಕರರ ದಿನಾಚರಣೆ ಪ್ರಯುಕ್ತ 2023-24, 2024-25, 2025-26 ನೇ ಸಾಲಿನ ಗದಗ ಜಿಲ್ಲಾ ಮಟ್ಟದ ರಾಜ್ಯ ಸರ್ಕಾರಿ ನೌಕರರ ದಿನಾಚರಣೆ -2025 ಹಾಗೂ ಸರ್ವೋತ್ತಮ ಸೇವಾ ಪ್ರಶಸ್ತಿ ಪ್ರದಾನ ಸಮಾರಂಭವನ್ನು ನಗರದ ಭಾರತ ರತ್ನ ಪಂಡಿತ ಭೀಮಸೇನ ಜೋಶಿ ರಂಗ ಮಂದಿರದಲ್ಲಿ ಎಪ್ರಿಲ್ 29 ರಂದು ಬೆಳಿಗ್ಗೆ 11 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದಲ್ಲಿ ಘನ ಉಪಸ್ಥಿತಿ ವಹಿಸುವರು. ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಕಾರ್ಯಕ್ರಮ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದರಾದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ.ಸಂಕನೂರ, ಪ್ರದೀಪ್ ಶೆಟ್ಟರ್, ಶಾಸಕರಾದ ಸಿ.ಸಿ.ಪಾಟೀಲ, ಡಾ.ಚಂದ್ರು ಲಮಾಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ ಆಗಮಿಸುವರು.

ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯದರ್ಶಿಗಳು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ , ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಶಾಖೆಯ ಅಧ್ಯಕ್ಷರು ಹಾಗೂ ರಾಜ್ಯ ಹಿರಿಯ ಉಪಾಧ್ಯಕ್ಷರಾದ ಡಾ.ರವಿ ಎಲ್ ಗುಂಜೀಕರ್ ಸ್ವಾಗತ ಕೋರಿದ್ದಾರೆ.

# ಜಿಲ್ಲಾ ವಕೀಲರ ಸಂಘದ ಪದಾಧಿಕಾರಿಗಳ ಪದಗ್ರಹಣ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ



ಜಿಲ್ಲಾ ವಕೀಲರ ಸಂಘದ ಸನ್ 2025-27ನೇ ಸಾಲಿನ ಪದಾಧಿಕಾರಿಗಳ ಆಯ್ಕೆ ಚುನಾವಣೆಯಲ್ಲಿ ಸಂಘದ ನೂತನ ಅಧ್ಯಕ್ಷರಾಗಿ ರಾಜಶೇಖರ್ ಗಂಗಪ್ಪ ಕಲ್ಲೂರ್, ಉಪಾಧ್ಯಕ್ಷರಾಗಿ ಮುದಕಪ್ಪ ಅಂದಪ್ಪ ಸಂಗನಾಳ, ಪ್ರಧಾನ ಕಾರ್ಯದರ್ಶಿಗಳಾಗಿ ಮಹಾಂತೇಶ ಅಯ್ಯಪ್ಪ ನಾಯ್ಕರ್, ಸಹ ಕಾರ್ಯದರ್ಶಿಗಳಾಗಿ ಚನ್ನಾರೆಡ್ಡಿ ಬಸವರಾಜ ಗೂಳರೆಡ್ಡಿ, ಖಜಾಂಚಿಯಾಗಿ ಶೈಲಜಾ ಬಸಯ್ಯ ಹಿರೇಮಠ ಆಯ್ಕೆಯಾಗಿದ್ದಾರೆ.

ಸಂಘದ ನೂತನ ಚುನಾಯಿತ ಪದಾಧಿಕಾರಿಗಳ ಪ್ರಮಾಣಪತ್ರ ವಿತರಣೆ, ಪ್ರಮಾಣ ವಚನ ಸ್ವೀಕಾರ ಹಾಗೂ ಪದಗ್ರಹಣ ಸಮಾರಂಭವನ್ನು ಎಪ್ರಿಲ್ 29ರಂದು ಸಾಯಂಕಾಲ 5.30ಕ್ಕೆ ವಕೀಲರ ಸಂಘದ ಸಭಾಂಗಣದಲ್ಲಿ ಆಯೋಜಿಸಲಾಗಿದ್ದು,

ಸಂಘದ ಸರ್ವ ಸದಸ್ಯರು ಈ ಸಮಾರಂಭದಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಬೇಕೆಂದು ಚುನಾವಣಾ ಅಧಿಕಾರಿಗಳಾದ ಎಮ್.ಎ. ಬಿಜಾಪೂರ ವಿನಂತಿಸಿದ್ದಾರೆ.

### ರಾಜ್ಯ ಮಟ್ಟದ 'ದಲಿತ ಯುವ ಕಾವ್ಯ ಕಮ್ಮಟ'ದಲ್ಲಿ ಡಾ. ಸತ್ಯಾನಂದ ಪಾತ್ರೋಟ

# ಅಹಂಕಾರದಿಂದ ಕಾವ್ಯ ಹುಟ್ಟದು

■ ವಿಜಯಸಾಕ್ಷಿ ಸುದ್ದಿ, ಗದಗ

ಕಾವ್ಯಕ್ಕೆ ಕಣ್ಣಿರಬೇಕು, ಕರುಳಿರಬೇಕು. ಎಲ್ಲಕ್ಕಿಂತ ಹೆಚ್ಚಾಗಿ ಕಾವ್ಯ ಹುಟ್ಟುವುದು ಸಂಕಟ ಹಾಗೂ ಪ್ರೀತಿಯ ಭಾವನೆಗಳಿಂದಲೇ ಹೊರತು ಅಹಂಕಾರದಿಂದ ಕಾವ್ಯ ಹುಟ್ಟಲು ಸಾಧ್ಯವಿಲ್ಲ ಎಂದು ಖ್ಯಾತ ಕವಿಗಳಾದ ಡಾ. ಸತ್ಯಾನಂದ ಪಾತ್ರೋಟ ನುಡಿದರು.

ಅವರು ರವಿವಾರ ಹುಲಕೋಟಿಯ ಕೃಷಿ ವಿಜ್ಞಾನ ಕೇಂದ್ರದಲ್ಲಿ ದಲಿತ ಸಾಹಿತ್ಯ ಪರಿಷತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಸಹಕಾರ ರೇಡಿಯೋ ಸಂಯುಕ್ತಾಶ್ರಯದಲ್ಲಿ ಜರುಗಿದ ರಾಜ್ಯ ಮಟ್ಟದ ದಲಿತ ಯುವ ಕಾವ್ಯ ಕಮ್ಮಟವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಕಾವ್ಯ ಇದೇ ರೀತಿ ಇರಬೇಕು ಎಂಬ ಕಟ್ಟುಪಾಡುಗಳಿಗೆ ನನ್ನ ವಿರೋಧವಿದ್ದು, ಕವಿಗಳಲ್ಲಿ ಹಿರಿಯ-ಕಿರಿಯ ಎಂಬ ಭೇದ ಇರಬಾರದು. ಮನುಷ್ಯತ್ವ ಇಲ್ಲದೆ ಕವಿಯಾಗುವುದು ಅಸಾಧ್ಯ. ಮನುಷ್ಯರ ಮನಸ್ಥಿತಿ ಬದಲಾಯಿಸುವ ಶಕ್ತಿ ಕಾವ್ಯಕ್ಕಿದೆ. ಇತ್ತೀಚಿನ ದಿನಗಳಲ್ಲಿ ಅಕ್ಷರಕ್ಕೂ ಮಡಿವಂತಿಕೆ ತಂದು ಕವಿತೆಗಳು ಹಾಗೂ ಕವಿಗಳನ್ನೂ ಸಹ ಜಾತಿ-ಧರ್ಮದ ಮಾನದಂಡದಲ್ಲಿ ವಿಭಜಿಸಲು ಹೊರಟಿರುವುದು ಆತಂಕಕಾರಿ ಸಂಗತಿ. ಕವಿ ಎನಿಸಿಕೊಂಡವನಿಗೆ ತನ್ನ ಸುತ್ತಲಿನ ಪರಿಸರ ಕಾಡಬೇಕು, ಈ ಕಾಡುವಿಕೆಯೇ ಕವಿತೆ ಕಟ್ಟುವಿಕೆಗೆ ಮೂಲವಾಗಿದೆ ಎಂದರು.

ಅತಿಥಿಗಳಾಗಿ ಆಗಮಿಸಿದ್ದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಾದ ವೀರಯ್ಯಸ್ವಾಮಿ ಹಿರೇಮಠ ಮಾತನಾಡಿ, ನಮ್ಮ ಇಲಾಖೆಯಿಂದ ಯುವ ಸಾಹಿತಿಗಳ ಅಪ್ರಕಟಿತ-ಸಗಟು ಕೃತಿಗಳಿಗೆ ಪ್ರೋತ್ಸಾಹಧನ ನೀಡುತ್ತಿದ್ದು, ಆನ್‌ಲೈನ್ ಮೂಲಕ ಕವಿಗಳು ಇದಕ್ಕೆ ಅರ್ಜಿ ಸಲ್ಲಿಸಿ, ಆಯ್ಕೆ ಸಮಿತಿಯ ಮುಂದೆ ಅರ್ಜಿ ಅನುಮೋದನೆಗೊಂಡರೆ ಈ ಸೌಲಭ್ಯ ಪಡೆದುಕೊಳ್ಳಬಹುದು. ದ.ಸಾ.ಪ ಮೌಲಿಕ ಕಾರ್ಯಕ್ರಮಗಳನ್ನು ನಡೆಸುತ್ತಿದ್ದು, ಕಾಲೇಜು ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಆಯೋಜಿಸಿ ಎಂದು ಸಲಹೆ ನೀಡಿದರು.

ದ.ಸಾ.ಪ ಉಪಾಧ್ಯಕ್ಷರಾದ ಡಾ. ವೈ.ಎಂ ಭಜಂತ್ರಿ ಮಾತನಾಡಿ, ಡಾ. ಅರ್ಜುನ ಗೊಳಸಂಗಿಯವರು ದ.ಸಾ.ಪವನ್ನು ಮಕ್ಕಳಂತೆ ಪ್ರೀತಿಸುತ್ತ ಬಂದಿದ್ದಾರೆ. ಕಳೆದ 30 ವರ್ಷಗಳಲ್ಲಿ ಈ ಪರಿಷತ್ತು ಬೆಳೆದ ಬಂದ ಹಾದಿ ಅತ್ಯಂತ ಕಷ್ಟದಾಯಕವಾಗಿದೆ. ಯುವಜನರನ್ನು ದಲಿತ ಸಂವೇದನೆಯ ವಾರಸುದಾರರನ್ನಾಗಿಸುವ ಹಿನ್ನೆಲೆಯಲ್ಲಿ ಕಮ್ಮಟ ಹಮ್ಮಿಕೊಂಡಿದ್ದು, ಕರ್ನಾಟಕದಲ್ಲಿ ತಳಸಮುದಾಯಗಳನ್ನು ಸಾಹಿತ್ಯಿಕವಾಗಿ-ಸಾಂಸ್ಕೃತಿಕವಾಗಿ ಒಗ್ಗೂಡಿಸುವ ಕಾರ್ಯವನ್ನು ದ.ಸಾ.ಪ ಮಾಡುತ್ತಿದೆ ಎಂದರು.

ಡಾ. ಎಚ್.ಬಿ ಕೋಲ್ಕಾರ ಸ್ವಾಗತಿಸಿದರು. ದಸಾಪ ರಾಜ್ಯಾಧ್ಯಕ್ಷ ಡಾ.ಅರ್ಜುನ ಗೊಳಸಂಗಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ದಲಿತ ಕಲಾ ಮಂಡಳಿ ಸದಸ್ಯರು ಹೋರಾಟದ ಹಾಡುಗಳನ್ನು ಹಾಡಿದರು. ಶಿಬಿರದ ನಿರ್ದೇಶಕರಾದ ಡಾ. ಸದಾಶಿವ ದೊಡಮನಿ, ಸಹ ನಿರ್ದೇಶಕರಾದ ಡಾ. ಎಚ್. ಲಕ್ಷ್ಮೀನಾರಾಯಣಸ್ವಾಮಿ, ಡಾ. ಸೋಮಕ್ಕ ಎಂ, ಹಿರಿಯ ಪತ್ರಕರ್ತರಾದ ಸುಭಾಷ ಮಡ್ಲೂರ, ಡಾ. ಅಪ್ಪಗೆರೆ ಸೋಮಶೇಖರ ಸೇರಿದಂತೆ ಶಿಬಿರಾರ್ಥಿಗಳು ಪಾಲ್ಗೊಂಡಿದ್ದರು.



> ಮೂರು ದಶಕಗಳಿಂದ ನನಗೆ ದಲಿತ ಸಾಹಿತ್ಯ ಪರಿಷತ್ ಒಡನಾಟವಿದ್ದು, ನನ್ನ ಕಾವ್ಯದ ಮೇಲೆ ವಿಚಾರ ಸಂಕಿರಣ ಏರ್ಪಡಿಸಿದ ಏಕೈಕ ಸಾಹಿತ್ಯಿಕ ಸಂಸ್ಥೆ ಇದಾಗಿದೆ. ಕ.ಸಾ.ಪದಂಥ ಸಾಹಿತ್ಯಿಕ ಸಂಸ್ಥೆಯಿಂದ ರಾಜ್ಯದಲ್ಲಿ ದಲಿತ ಸಾಹಿತ್ಯಕ್ಕೆ ಸೂಕ್ತ ಪ್ರಾತಿನಿಧ್ಯ ಸಿಗದಿದ್ದಾಗ ಆ ಕೊರಗನ್ನು ನೀಗಿಸುವ ಕೆಲಸವನ್ನು ಸಮರ್ಥವಾಗಿ ಮಾಡುತ್ತಿರುವ ದ.ಸಾ.ಪ ಇನ್ನೂ ಉತ್ತರೋತ್ತರವಾಗಿ ಬೆಳೆಯಲಿ.
>
> **– ಡಾ. ಸತ್ಯಾನಂದ ಪಾತ್ರೋಟ.**
> ಖ್ಯಾತ ಕವಿಗಳು.

# ನಾಳೆ ಬಸವ ಜಯಂತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ವತಿಯಿಂದ ಕರ್ನಾಟಕದ ಸಾಂಸ್ಕೃತಿಕ ನಾಯಕ ಶ್ರೀ ಬಸವೇಶ್ವರರ ಜಯಂತಿ-2025 ಕಾರ್ಯಕ್ರಮವನ್ನು ಎಪ್ರಿಲ್ 30 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಪೂಜ್ಯ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಶಿವಾನುಭವ ಮಂಟಪದಲ್ಲಿ ಹಮ್ಮಿಕೊಳ್ಳಲಾಗಿದೆ.

ಶಿರೋಳ ತೋಂಟ-ದಾರ್ಯ ಮಠ ಹಾಗೂ ಬೈರನಹಟ್ಟಿಯ ವಿರಕ್ತಮಠ ದೊರೆಸ್ವಾಮಿ ಪೂಜ್ಯ ಶಾಂತಲಿಂಗ ಮಹಾಸ್ವಾಮಿಗಳು ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸುವರು.

ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದಲ್ಲಿ ಘನ ಉಪಸ್ಥಿತಿ ವಹಿಸುವರು.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಕಾರ್ಯಕ್ರಮ ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದರಾದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ.ಸಂಕನೂರ, ಪ್ರದೀಪ್ ಶೆಟ್ಟರ್, ಶಾಸಕರಾದ ಸಿ.ಸಿ.ಪಾಟೀಲ, ಡಾ.ಚಂದ್ರು ಲಮಾಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ ಆಗಮಿಸುವರು.

ಶರಣ ತತ್ವ ಚಿಂತಕರಾದ ಜಿ.ಎಸ್. ಪಾಟೀಲ ಅವರು ವಿಶೇಷ ಉಪನ್ಯಾಸ ನೀಡಲಿದ್ದಾರೆ.

ಕುಮಾರ ಪ್ರಸಾದ ಸುತಾರ ಮತ್ತು ತಂಡದವರು ವಚನ ಗಾಯನ ಪ್ರಸ್ತುತ ಪಡಿಸುವರು.

ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯದರ್ಶಿಗಳು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯ ಸ್ವಾಮಿ ಬಿ ಸ್ವಾಗತ ಕೋರಿದ್ದಾರೆ.

### ವಿಶ್ವ ಮಲೇರಿಯಾ ದಿನಾಚರಣೆ ನಿಮಿತ್ತ ಜಿಲ್ಲಾ ಮಟ್ಟದ ಜನಜಾಗೃತಿ ಜಾಥಾ

# ಶೂನ್ಯ ಮಲೇರಿಯಾ ವರ್ಗೀಕರಣ ಸಾಧಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯು 2027ರ ವೇಳೆಗೆ ಶೂನ್ಯ ಸ್ಥಳೀಯ ಮಲೇರಿಯಾವನ್ನು ಖಚಿತಪಡಿಸಿಕೊಂಡು ಶೂನ್ಯ ಮಲೇರಿಯಾ ವರ್ಗೀಕರಣ ಸಾಧಿಸಿ, ಕೊನೆಯ ಮೈಲಿಗಲ್ಲನ್ನು ತಲುಪುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್ ನೀಲಗುಂದ ಹೇಳಿದರು.

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ವಿಭಾಗ ಮತ್ತು ಜಿಲ್ಲಾ ಐ.ಇ.ಸಿ ವಿಭಾಗಗಳ ಸಂಯುಕ್ತ ಆಶ್ರಯದಲ್ಲಿ ಯು.ಪಿ.ಹೆಚ್.ಸಿ ಬೆಟಗೇರಿಯಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ವಿಶ್ವ ಮಲೇರಿಯಾ ದಿನಾಚರಣೆ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.




ಈ ಸಂದರ್ಭದಲ್ಲಿ ಕಾರ್ಯಕ್ರಮದ ಅನುಷ್ಠಾನ ಅಧಿಕಾರಿಗಳಾದ ಡಾ. ಆರುಂದತಿ ಕುಲಕರ್ಣಿ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಗದಗ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಸವರಾಜ ಬಳ್ಳಾರಿ, ಡಾ. ಪ್ರೀತ್ ಖೋನಾ, ತಾಲೂಕಾ ಆರೋಗ್ಯ ಅಧಿಕಾರಿ ಮಧುಮತಿ, ಡಾ. ಸುಧಾ ಕಳಸದ ವೈದ್ಯಾಧಿಕಾರಿಗಳು ಚಿಂಚಲಿ, ಡಿ.ವಾಯ್.ಹೆಚ್.ಇ.ಓ ಪುಷ್ಪಾ ಪಾಟೀಲ, ಡಿ.ವಾಯ್.ಹೆಚ್.ಇ.ಓ ಗೀತಾ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಅಧಿಕಾರಿಗಳ ಕಾರ್ಯಾಲಯದ ಸಿಬ್ಬಂದಿಗಳಾದ ರಿಯಾಜ್ ಘೂಡುನಾಯ್ಕರ, ಎಮ್. ಹೆಚ್. ಕದಾಂಪೂರ, ಎಸ್.ಎನ್. ಲಿಂಗದಾಳ, ಬಿ.ಸಿ. ಹಿರೇಹಾಳ, ಎಮ್.ಎಫ್. ಕಲಕಂಬಿ, ಬಸವರಾಜ ಸೋಮಗೊಂಡ, ರೋಹಿತ್ ಹುಲ್ಲೂರು, ಮೈಲಾರಿ ಬಿಳೇಎಲಿ, ವಾಯ್.ವಾಯ್. ಹಕ್ಕಿ, ಆರ್.ವಿ. ಗುರಣ್ಣನವರ, ವಾಯ್.ವಾಯ್. ಕಡೇಮನಿ, ಫಕೀರೇಶ ರಾಮಗೇರಿ, ನಾಗರಾಜ ಜೋಷಿ, ನದಾಫ್, ಮೃತ್ಯುಂಜಯ ವಿ. ಹಿರೇಮಠ, ಮಂಜುನಾಥ ಸಜ್ಜನರ, ರವಿ ಪುತಲೇಕರ, ಕೃಷ್ಣಾ ಗಾಡರಡ್ಡಿ, ಶಾಮವೇಲ್ ಕರಡಿಗುಡ್ಡ, ನಜೀರಅಹ್ಮದ ನದಾಫ್, ಆರೋಗ್ಯ ಸುರಕ್ಷಣಾಧಿಕಾರಿ ಸವಿತಾ ಪವಾರ, ಆರ್.ಎಸ್. ಹೊಸೂರು, ಎಸ್. ಹೆಚ್. ಮುರನಾಳ, ಉಪ್ಪಾರ, ಜಯಶ್ರೀ ದಬಾಲಿ, ಆರ್.ಆರ್. ಅಡ್ಡನವರ, ವಾಯ್.ಎ. ವಡ್ಡಟ್ಟಿ, ಲಕ್ಷ್ಮೀ ಪೂಜಾರ ಸೇರಿದಂತೆ ಗದಗ ನಗರದ ಆಶಾ ಕಾರ್ಯಕರ್ತೆಯರು, ಕ್ಷೇತ್ರ ಮಟ್ಟದ ಅಧಿಕಾರಿಗಳು, ಸಿಬ್ಬಂದಿ ವರ್ಗದವರಿದ್ದರು.

ಜಿಲ್ಲಾ ಆರೋಗ್ಯ ಶಿಕ್ಷಣ ಅಧಿಕಾರಿ ರೂಪಸೇನ ಚವ್ಹಾಣ ಗದಗ ಸದರಿ ಕಾರ್ಯಕ್ರಮಕ್ಕೆ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರಿಗೆ ಸ್ವಾಗತ ಕೋರಿದರು. ಅಜಯಕುಮಾರ ಕಲಾಲ ಡಿ.ವಿ.ಬಿ.ಡಿ.ಸಿ.ಪಿ ವಿಭಾಗದ ಆರೋಗ್ಯ ನಿರೀಕ್ಷಣಾಧಿಕಾರಿ ವಂದಿಸಿದರು.

> ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ. ಹೆಚ್.ಎಲ್ ಗಿರಡ್ಡಿ ಮಾತನಾಡಿ, ಮಲೇರಿಯಾ ನಿವಾರಣೆ ನಿಟ್ಟಿನಲ್ಲಿ ಸಮುದಾಯ ಪಾತ್ರವು ಮಹತ್ವದಾಗಿದ್ದು, ಈ ನಿಟ್ಟಿನಲ್ಲಿ ಅಗ್ಯತ ಸಹಕಾರ ದೊರೆತಾಗ ಮಾತ್ರವೇ ಗುರಿ ಸಾಧನೆ ಸಾಧ್ಯವಾಗುತ್ತದೆ. ಮಲೇರಿಯಾ ನಿವಾರಣೆ ಗುರಿ ಸಾಧನೆಗೆ ಪೂರಕವಾಗುವಂತೆ ಮಾಹಿತಿಯನ್ನು ತಲುಪಿಸಲು ಎಲ್ಲ ಕ್ಷೇತ್ರಮಟ್ಟದ ಸಿಬ್ಬಂದಿಗಳು ಸದರಿ ಚಟುವಟಿಕೆಗಳ ಬಗ್ಗೆ ಕ್ರಿಯಾ ಯೋಜನೆ ಮಾಡಿಕೊಂಡು ಗ್ರಾಮೀಣ ಮಟ್ಟದಲ್ಲಿ ಹೆಚ್ಚಿನ ಕಾರ್ಯ ನಿರ್ವಹಿಸಿ ಜಿಲ್ಲೆಯಲ್ಲಿ ಸ್ಥಳೀಯವಾಗಿ ಯಾವುದೇ ಮಲೇರಿಯಾ ಪ್ರಕರಣಗಳು ಕಂಡುಬರದ ಹಾಗೆ ನೋಡಿಕೊಳ್ಳಲು ತಿಳಿಸಿದರು.

# ಅವಾಂತರ ಸೃಷ್ಟಿಸಿದ ಮಳೆರಾಯ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಮುಂಗಾರು ಮಳೆಯ ಅಬ್ಬರ ತಾಲೂಕಿನ ಅನೇಕ ಕಡೆಗಳಲ್ಲಿ ಅವಾಂತರ ಸೃಷ್ಟಿ ಮಾಡಿದ್ದು, ಅನೇಕ ಗ್ರಾಮಗಳಲ್ಲಿ ರವಿವಾರ ಸುರಿದ ಭಾರೀ ಮಳೆ-ಬಿರುಗಾಳಿಗೆ ಗ್ರಾಮಸ್ಥರು ಪರದಾಡುವಂತಾಗಿದೆ.

ತಾಲೂಕಿನ ದೊಡ್ಡೂರು ಗ್ರಾಮದಲ್ಲಿ ಭಾನುವಾರ ರಾತ್ರಿ ಸುರಿದ ರಕ್ಕಸ ಮಳೆ ಗ್ರಾಮದಲ್ಲಿ ಅವಾಂತರ ಸೃಷ್ಟಿಸಿದೆ. ಜೋರು ಗಾಳಿಗೆ ಮನೆಗಳ ಮೇಲ್ಛಾವಣಿಗೆ ಹೊದಿಸಿದ್ದ ತಗಡಿನ ಶೀಟ್‌ಗಳು ಹಾರಿ ಹೋಗಿದ್ದು, ಹಲವು ಮನೆಗಳಲ್ಲಿ ನೀರು ತುಂಬಿಕೊಂಡಿದೆ. ಇದೇ ಗ್ರಾಮದಲ್ಲಿ ಕೆಲ ಮನೆಗಳು ಸಂಪೂರ್ಣ ನೆಲಕಚ್ಚಿದ್ದು, ಇಡಿ ರಾತ್ರಿ ಜನರು ನಿದ್ದೆಯಿಲ್ಲದೆ ಬೇರೆಯವರ ಮನೆಯನ್ನು ಅವಲಂಬಿಸುವಂತಾಗಿತ್ತು. ಗ್ರಾಮದ ನಿಂಗಪ್ಪ ನೀಲಪ್ಪ ರಗಟಿ ಅವರ ಗಿರಣಿ ಮನೆ, ಪರಸಪ್ಪ ಚನಬಸಪ್ಪ ಚಿಂಚಲಿ, ಲಕ್ಷ್ಮವ್ವ ಕುರಿ, ಅನಸವ್ವ ಯಲ್ಲಪ್ಪ ಕೊಂಚಿಗೇರಿ ಮನೆ ಕಳೆದುಕೊಂಡು ನಿರ್ಗತಿಕರಾಗಿದ್ದಾರೆ.

ದೊಡ್ಡೂರು ಗ್ರಾ.ಪಂ ವ್ಯಾಪ್ತಿಯ ಉಂಡೇನಹಳ್ಳಿಯಲ್ಲೂ ಮಳೆ ಅನಾಹುತ ಮಾಡಿದ್ದು, ಹತ್ತಾರು ಮರಗಳು ಹಾಗೂ ವಿದ್ಯುತ್ ಕಂಬಗಳು ಧರೆಗುರುಳಿವೆ. ಶೇಖಪ್ಪ ಬಳಗಲಿ ಅವರ ಮನೆಯ ಮೇಲೆ ಮರವೊಂದು ಮುರಿದು ಬಿದ್ದಿದ್ದು, ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಅದರಂತೆ ಸೂರಣಗಿ ಗ್ರಾಮದಲ್ಲೂ ಭಾರೀ ಮಳೆಯಾಗಿದೆ. ಗ್ರಾಮದ ಸೋಮಣ್ಣ ಭೀಮಪ್ಪ ಪೂಜಾರ ಅವರಿಗೆ ಸೇರಿದ ಎತ್ತು ಸಿಡಿಲು ಬಡಿದು ಅಸುನೀಗಿದ ಕುರಿತು ವರದಿಯಾಗಿದೆ.

ಮಳೆಯ ರಭಸಕ್ಕೆ ಅನೇಕ ತಗ್ಗು ಪ್ರದೇಶಗಳಿಗೆ ನೀರು ನುಗ್ಗಿದ್ದು, ಯಾವುದೇ ಅನಾಹುತಗಳು ಸಂಭವಿಸಿಲ್ಲ. ಬಿಸಿಲಿನ ತಾಪಮಾನದಿಂದ ಕಂಗೆಟ್ಟಿದ್ದ ಜನತೆಗೆ ಮಳೆ ತಂಪು ನೀಡಿತ್ತು. ಸೂರಣಗಿ, ಹರದಗಟ್ಟಿ, ದೊಡ್ಡೂರು, ಉಂಡೇನಹಳ್ಳಿ, ಆದರಳ್ಳಿ, ಅಕ್ಕಿಗುಂದ, ಗೊಜನೂರು ಸೇರಿದಂತೆ ಅನೇಕ ಕಡೆಗಳಲ್ಲಿಯೂ ಮಳೆ ಸುರಿದಿದೆ.

# ನಿಖಿಲ ಬಾಂಡಗೆಯವರಿಗೆ ಸನ್ಮಾನ



■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರಸಕ್ತ ವರ್ಷದ ಪಿಯುಸಿ ಪರೀಕ್ಷೆಯಲ್ಲಿ ಅಳಿಕೆಯ ಶ್ರೀ ಸತ್ಯಸಾಯಿ ಸಾಯಿ ಲೋಕ ಸೇವಾ ಪಿಯು ಕಾಲೇಜಿನ ವಿದ್ಯಾರ್ಥಿ, ಗದುಗಿನ ನಿಖಿಲ ಲಕ್ಷ್ಮಣ ಬಾಂಡಗೆ ಅವರು ವಿಜ್ಞಾನ ವಿಭಾಗದಲ್ಲಿ ಶೇ. 98.34 ಅಂಕಗಳನ್ನು ಗಳಿಸಿ ಉತ್ತಮ ಸಾಧನೆ ಮಾಡಿದ ಹಿನ್ನೆಲೆಯಲ್ಲಿ ನಗರದ ಗಂಗಾಪೂರ ಪೇಟೆಯಲ್ಲಿರುವ ಶ್ರೀ ಬನಶಂಕರಿ ದೇವಸ್ಥಾನದ ಆವರಣದಲ್ಲಿ ಶ್ರೀದುರ್ಗಾದೇವಿ ಶಿಕ್ಷಣ ಸಮಿತಿ ವತಿಯಿಂದ ಅವರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ನಿಖಿಲ ಬಾಂಡಗೆ ಅವರ ಅಜ್ಜಿ ವಿಮಲಾಬಾಯಿ, ತಂದೆ ಲಕ್ಷ್ಮಣ, ತಾಯಿ ರೂಪಾ ಸೇರಿದಂತೆ ಶ್ರೀ ದುರ್ಗಾದೇವಿ ಶಿಕ್ಷಣ ಸಮಿತಿಯ ನಿರ್ದೇಶಕ ಮೋಹನ ಇಮರಾಪೂರ, ಸಲಹಾ ಸಮಿತಿಯ ಸದಸ್ಯರಾದ ಫಕ್ಕಿರಪ್ಪ(ಮುತ್ತು) ಜಡಿ, ಹಿರಿಯರಾದ ರವಿ ಹಮಸಾಗರ, ರವಿ ಕಂಪ್ಲಿ, ವಸಂತ ಇಂಜನಿ, ಬಸವರಾಜ ಅಣ್ಣಿಗೇರಿ, ಮಲ್ಲೇಶ ಬಿಂಗಿ, ನಾಗರಾಜ ಶಿದ್ಲಿಂಗ, ಶಂಕರ ಕುದರಿಮೋತಿ, ಚನ್ನಪ್ಪ ಕೊಪ್ಪದ ಮುಂತಾದವರು ಉಪಸ್ಥಿತರಿದ್ದರು.

## ಅ.ಭಾ ವೀರಶೈವ ಮಹಾಸಭಾದಿಂದ ಬಸವ ಜಯಂತಿಯ ಕಾರ್ಯಕ್ರಮಗಳು

▶▶ ಮೊದಲನೇ ಪುಟದಿಂದ

ತೋಂಟದಾರ್ಯ ಮಠದ ಎದುರಿಗೆ ಬಸವಣ್ಣನವರ ಭಾವಚಿತ್ರಕ್ಕೆ ಪೂಜ್ಯ ಜ.ಡಾ. ಸಿದ್ಧರಾಮ ಮಹಾಸ್ವಾಮಿಗಳು, ಗದಗ ಜಿಲ್ಲಾಧಿಕಾರಿಗಳು ಮಾಲಾರ್ಪಣೆ ಮಾಡುವ ಮೂಲಕ ಬೃಹತ್ ಮೆರವಣಿಗೆಗೆ ಚಾಲನೆ ನೀಡುವರು. ಮೆರವಣಿಗೆಗೆ ವೀರಶೈವ ಮಹಾಸಭಾ ಸಾಥ್ ನೀಡಲಿದ್ದು, ಸರ್ವ ಪದಾಧಿಕಾರಿಗಳು, ಆಜೀವ ಸದಸ್ಯರು ಪಾಲ್ಗೊಂಡು ಎಲ್ಲ ಕಾರ್ಯಕ್ರಮ ಯಶಸ್ವಿಗೊಳಿಸಲು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಗದಗ ಜಿಲ್ಲಾ ಘಟಕದ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ವಿನಂತಿಸಿದ್ದಾರೆ.

# ನಿಧನ

**ಸದಾಶಿವಭಟ್ಟ ಜೋಶಿ**



**ಅಣ್ಣಿಗೇರಿ:** ಪಟ್ಟಣದ ಜನಾನುರಾಗಿ, ಬಸದಿ ಓಣಿ ನಿವಾಸಿ ಸದಾಶಿವಭಟ್ಟ ಗೋವಿಂದಭಟ್ಟ ಜೋಶಿ (64) ಶನಿವಾರ ನಿಧನರಾದರು. ಅವರಿಗೆ ಪತ್ನಿ, ಇಬ್ಬರು ಪುತ್ರರು ಸೇರಿದಂತೆ ಅಪಾರ ಬಂಧು ಬಳಗವಿದೆ.

ಸದಾಶಿವಭಟ್ಟ ಜೋಶಿ ಅವರು ಆದಿಕವಿ ಪಂಪನ ತಾಯಿಯ ತವರು ಮನೆತನದ ವಂಶಜರಾಗಿದ್ದಾರೆ.

# ಜಿಲ್ಲಾ ಭಗೀರಥ ಉಪ್ಪಾರ ಸಂಘದ ನೂತನ ಪದಾಧಿಕಾರಿಗಳ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಮುಳಗುಂದ ರಸ್ತೆಯ ಕಿತ್ತೂರು ರಾಣಿ ಚನ್ನಮ್ಮ ಮಂಗಳ ಭವನದಲ್ಲಿ ಭಾನುವಾರ ನಡೆದ ಉಪ್ಪಾರ ಸಮಾಜದ ಸಭೆಯಲ್ಲಿ ಜಿಲ್ಲಾ ಭಗೀರಥ ಉಪ್ಪಾರ ಜಿಲ್ಲಾ ಸಂಘದ ನೂತನ ಪದಾಧಿಕಾರಿಗಳ ಆಯ್ಕೆ ಮಾಡಲಾಯಿತು.



ಸಂಘದ ಅಧ್ಯಕ್ಷರಾಗಿ ಭೀಮನಗೌಡ ಪಾಟೀಲ, ಗೌರವಾಧ್ಯಕ್ಷರಾಗಿ ಅನಿಲ ಗರಗ, ಪ್ರಧಾನ ಕಾರ್ಯದರ್ಶಿಯಾಗಿ ರಾಜು ಗದ್ದಿ, ಖಜಾಂಚಿಯಾಗಿ ಪ್ರಭಾಕರ್ ಸಾವಕ್ಕನವರ್, ಸಹ ಖಜಾಂಚಿಯಾಗಿ ಮಂಜುನಾಥ ಸಂಜೀವಣ್ಣವರ್, ಉಪಾಧ್ಯಕ್ಷರಾಗಿ ರಾಜಶೇಖರ್ ಮಾಲಗಿತ್ತಿ, ಮಹಾದೇವಪ್ಪ ಪ್ಯಾಟಿ, ಶಿವಪುತ್ರಪ್ಪ ಕುಂದ್ರಳ್ಳಿ, ಸಂಘಟನಾ ಕಾರ್ಯದರ್ಶಿಯಾಗಿ ಪಾಂಡುರಂಗ ಕನಕಾಪೂರ, ಸಹ ಕಾರ್ಯದರ್ಶಿಯಾಗಿ ದೇವಪ್ಪ ಉಪ್ಪಾರ, ಜಿಲ್ಲಾ ಸಂಚಾಲಕರಾಗಿ ಮಂಜುನಾಥ ಉಪ್ಪಾರ, ಮಹಿಳಾ ಸಂಘಟನಾ ಕಾರ್ಯದರ್ಶಿಯಾಗಿ ನಿಂಗವ್ವ ಹುಗ್ಗೆಪ್ಪನವರ್, ಮಹಿಳಾ ಕಾರ್ಯದರ್ಶಿಯಾಗಿ ದೇವಕ್ಕ ತಿಪ್ಪಣ್ಣವರ್ ಅವರನ್ನು ಆಯ್ಕೆ ಮಾಡಲಾಯಿತು. ಜಿಲ್ಲಾ ಸಂಘದ ಅಧ್ಯಕ್ಷರು ಹಾಗೂ ಪದಾಧಿಕಾರಿಗಳ ಆಯ್ಕೆ ನಂತರ, ಮೇ.4ರಂದು ಸರಕಾರದ ಸಹಯೋಗದೊಂದಿಗೆ ನಡೆಯುವ ಮಹರ್ಷಿ ಭಗೀರಥ ಜಯಂತಿ ಕುರಿತು ಚರ್ಚಿಸಲಾಯಿತು.

ಈ ಸಂದರ್ಭದಲ್ಲಿ ಈರಣ್ಣ ಗಡಾದ, ಮಂಜುನಾಥ ಹುಯಿಲಗೋಳ, ಕೃಷ್ಣಾ ಗಡಾದ, ಸುರೇಶ್ ಉಪ್ಪಾರ, ಶಿವಪುತ್ರಪ್ಪ ಉಪ್ಪಾರ, ದೇವಪ್ಪ ಉಪ್ಪಾರ, ಶಂಕ್ರಪ್ಪ ಹೊನಕೇರಿ, ಪ್ರೊ. ಮಲ್ಲೇಶ್, ಚನ್ನಪ್ಪ ಹಸರಂಬಿ, ಕನಕಪ್ಪ ಜಮಾದಾರ್, ಮಾರ್ತಂಡಪ್ಪ ಉಪ್ಪಾರ, ಲಕ್ಷ್ಮಣ ಜಮಾದಾರ್, ಬಸವಣ್ಣೆಪ್ಪ ಉಪ್ಪಾರ, ನವೀನ್ ಹುಯಿಲಗೋಳ, ಮಂಜುನಾಥ ಸಂಜೀವಣ್ಣವರ್, ರಾಮಪ್ಪ ಉಪ್ಪಾರ, ಕನಕಪ್ಪ ಅಗಸಿಮನಿ, ಮಂಜುನಾಥ ಕಟ್ಟಿಮನೊ, ಸಾಬಣ್ಣ, ಮಹಾಂತೇಶ ಮಂತ್ರಿ, ನಿಂಗಪ್ಪ ಇಟಗಿ, ಪರಸಪ್ಪ ತಿಪ್ಪಣ್ಣವರ್, ಗಿರೀಶ್ ಹಳ್ಳಿ, ನಾಗರಾಜ್ ಉಪ್ಪಾರ, ಶರಣಪ್ಪ ಉಪ್ಪಾರ, ಹನುಮಪ್ಪ ಹುಗ್ಗಪ್ಪನವರ್, ಸತೀಶ್ ಮಂತ್ರಿ, ರಾಮಪ್ಪ ಉಪ್ಪಾರ ಸೇರಿದಂತೆ ಸಮಾಜ ಬಾಂಧವರು ಇದ್ದರು.

### ರೈತರ ಆರ್ಥಿಕ ಶಕ್ತಿ ಹೆಚ್ಚಿಸುತ್ತಿರುವ ತೋಟಗಾರಿಕಾ ಅಧಿಕಾರಿಯನ್ನು ಅರಸಿ ಬಂದ ಪುರಸ್ಕಾರ

# ತಾಂಬೋಟಿಯವರಿಗೆ 'ಸರ್ವೋತ್ತಮ ಸೇವಾ ಪ್ರಶಸ್ತಿ'

■ವಿಜಯಸಾಕ್ಷಿ ಸುದ್ದಿ, ಡಂಬಳ

ತಮ್ಮ ಪ್ರಾಮಾಣಿಕ ಸೇವೆಯ ಮೂಲಕ ಸಾವಿರಾರು ರೈತರ ಆರ್ಥಿಕ ಬದುಕನ್ನು ಸುಧಾರಿಸಲು ಮುಂಡರಗಿ ತಾಲೂಕಾ ತೆ-ೋಟಗಾರಿಕಾ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾಗಿ ಸೇವೆ ಸಲ್ಲಿಸುತ್ತಿರುವ ಮಹಮ್ಮದರಫಿ ಎಮ್.ತಾಂಬೋಟಿ ಅವರು ಮುಂಡರಗಿ ತಾಲೂಕಿನ ಕ್ರಿಯಾಶೀಲ ಅಧಿಕಾರಿಗಳಾಗಿ ಅನುಪಮ ಸೇವೆ ಸಲ್ಲಿಸಿ, ಗದಗ ಜಿಲ್ಲಾ ಮಟ್ಟದ 'ಸರ್ವೋತ್ತಮ ಸೇವಾ ಪ್ರಶಸ್ತಿ'ಗೆ ಭಾಜನರಾಗಿದ್ದಾರೆ.

2007ರಲ್ಲಿ ಗದಗ ತಾಲೂಕಾ ತೋಟಗಾರಿಕಾ ಇಲಾಖೆಯಲ್ಲಿ ವೃತ್ತಿ ಜೀವನ ಆರಂಭಿಸಿ 3 ವರ್ಷಗಳ ಸೇವೆ ಸಲ್ಲಿಸಿದರು. ಬಳಿಕ ಬೀದರ ಜಿಲ್ಲೆಯ ಔರಾಧದಲ್ಲಿ ರೈತರ ಪ್ರೀತಿಗೆ ಪಾತ್ರರಾಗಿ 3 ವರ್ಷ ಸೇವೆ ಸಲ್ಲಿಸಿದರು. 2013ರಿಂದ 2015ರವರೆಗೆ ರೋಣದಲ್ಲಿ ಪದನ್ನೋತಿಯನ್ನು ಪಡೆದು ಹಿರಿಯ ಸಹಾಯಕ ತೋಟಗಾರಿಕಾ ನೀರ್ದೇಶಕರಾಗಿ ಬೀದರ ಜಿಲ್ಲೆಯ ಹುಮನಾಬಾದದಲ್ಲಿ 1 ವರ್ಷ, ಗದಗ ಜಲಾನಯನ ಇಲಾಖೆಯಲ್ಲಿ 1 ವರ್ಷ, 2017ರಿಂದ 2021ರವರೆಗೆ ರೋಣದಲ್ಲಿ, 2021ರಿಂದ 2023ರವಗೆ ಬಾಗಲಕೋಟೆ ಜಿಲ್ಲೆಯ ಬಾದಾಮಿ ತಾಲೂಕಿನಲ್ಲಿ ಸೇವೆ ಸಲ್ಲಿಸಿ, 2023ರಿಂದ ಮುಂಡರಗಿ ತಾಲೂಕಿನಲ್ಲಿ ಸೇವಾ ನಿರತರಾಗಿ ಇಲಾಖೆಯ ಸಿಬ್ಬಂದಿಗೆ ಪ್ರೇರಣೆಯಾಗಿದ್ದಾರೆ.

ಈ ಬಾರಿ ಮುಂಗಡಪತ್ರದಲ್ಲಿ ಸಿಎಂ ಸಿದ್ದರಾಮಯ್ಯ ಗದಗ ಜಿಲ್ಲೆಯ ಡಂಬಳಕ್ಕೆ ತೋಟಗಾರಿಕಾ ಕಾಲೇಜು ನಿರ್ಮಾಣವಾಗಬೇಕು, ಈ ಭಾಗದ ರೈತರು ಇನ್ನಷ್ಟು ಉತ್ತಮ ಸ್ಥಿತಿಗೆ ತಲಪಬೇಕೆನ್ನುವ ಹಿನ್ನೆಲೆಯಲ್ಲಿ



ಈ ಭಾಗದ ಜನಪ್ರತಿನಿಧಿಗಳು ಮತ್ತು ಹಿರಿಯ ಅಧಿಕಾರಿಗಳ ಸಲಹೆ-ಸೂಚನೆಯಂತೆ ತಮ್ಮನ್ನು ತೊಡಗಿಸಿಕೊಂಡು ಮಹಮ್ಮದರಫೀಕ ಶ್ರಮಿಸುತ್ತಿದ್ದಾರೆ.

ಮುಂಡರಗಿ ತಾಲೂಕಿನಾದ್ಯಂತ ತಮ್ಮ ವೈಜ್ಞಾನಿಕ ಮತ್ತು ದೇಸೀ ಮಾದರಿಯನ್ನು ಬಳಸಿಕೊಂಡು ಯಾವ ರೀತಿಯಾಗಿ ಉತ್ತಮ ಬೆಳೆ ಬೆಳೆಯಬಹುದೆಂದು ರೈತರಿಗೆ ಸೂಕ್ತ ಸಲಹೆ ನೀಡುತ್ತ, ರೈತರು ನೂರಾರು ಹೆಕ್ಟೇರ್ ಪ್ರದೇಶದಲ್ಲಿ ಉತ್ತಮ ಫಸಲು ಪಡೆಯುವಂತೆ ಮಾಡಿದ ಶ್ರೇಯಸ್ಸು ಮಹಮ್ಮದರಫಿ ಎಮ್.ತಾಂಬೋಟಿ ಅವರಿಗೆ ಸಲ್ಲುತ್ತದೆ.

ಇವರ ಸಲಹೆ-ಸೂಚನೆಯಂತೆ ನರೇಗಾದಡಿ ತೋಟಗಾರಿಕೆ ಬೆಳೆಯ ಮೂಲಕ ಮಹಿಳೆ ನೀಲಮ್ಮ ಶಿರುಂದ ರಾಜ್ಯ ಮಟ್ಟದ ಪ್ರಶಸ್ತಿಗೆ ಭಾಜನರಾಗಿದ್ದಾರೆ. ನರೇಗಾ ಯೋಜನೆಯಡಿ ಸಹಾಯಧನ ಪಡೆದು 14 ಎಕರೆ ದಾಳಿಂಬೆ ಬೆಳೆಯುವ ಮೂಲಕ ವಿಜಯಕುಮಾರ ಶಿರುಂದ 1 ಕೋಟಿಗೂ ಹೆಚ್ಚು ಆದಾಯ ಪಡೆದು ತಾಲೂಕಿನ ಇತರೆ ರೈತರಿಗೆ ಮಾದರಿಯಾಗಿದ್ದಾರೆ. ಬಾಗೇವಾಡಿ ಗ್ರಾಮದ ನಾಗರಾಜ ಯಳವತ್ತಿ 1 ಹೆಕ್ಟೇರ್ ಬಾಳೆ, ಮೈಲಾರಪ್ಪ ಚೋಳಮ್ಮನವರ ಡ್ರ್ಯಾಗನ್ ಬೆಳೆ ಬೆಳೆಯುವ ಮೂಲಕ ಲಕ್ಷಾಂತರ ರೂ ಆದಾಯ ಪಡೆದು ಮಾದರಿಯಾಗಿದ್ದಾರೆ. ಹೀಗೆ ರೈತರ ಆರ್ಥಿಕ ಶಕ್ತಿಯನ್ನು ಹೆಚ್ಚಿಸಲು ಶ್ರಮಿಸುತ್ತಿರುವ ಇವರಿಗೆ ಗದಗ ಜಿಲ್ಲಾ ಮಟ್ಟದ 'ಸರ್ವೋತ್ತಮ ಸೇವಾ ಪ್ರಶಸ್ತಿ' ಅರಸಿ ಬಂದಿದೆ.

> ನಾವು 14 ಎಕರೆ ಪ್ರದೇಶದಲ್ಲಿ ದಾಳಿಂಬೆ ಬೆಳೆದು ಒಳ್ಳೆಯ ಲಾಭ ಪಡೆಯುವ ಮೂಲಕ ಆರ್ಥಿಕ ಮುಖ್ಯ ಪ್ರವಾಹಿನಿಗೆ ಬರಲು ನಮಗೆ ನಿರಂತರ ಸಲಹೆ, ಇಲಾಖಾ ಸವಲತ್ತುಗಳನ್ನು ಸರಿಯಾದ ಸಮಯಕ್ಕೆ ಪೂರೈಯಿಸುತ್ತಿರುವ ಮಹಮ್ಮದರಫಿ ಅವರಿಗೆ ಗದಗ ಜಿಲ್ಲಾ ಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿ ನೀಡಿ ಗೌರವಿಸುತ್ತಿರುವುದು ಸಂತಸ ತಂದಿದೆ.
>
> **– ವಿಜಯಕುಮಾರ ಶಿರುಂದ.**
> ಜಂತ್ಲಿ ಶಿರೂರ ಗ್ರಾಮದ ರೈತ.

> ಗದಗ ಜಿಲ್ಲೆಯ ಹಿರಿಯ ಅಧಿಕಾರಿಗಳ ಸಲಹೆ-ಸೂಚನೆ, ಸಿಬ್ಬಂದಿ ವರ್ಗದವರ ಸಹಕಾರ, ರೈತರ ಆಸಕ್ತಿಯಿಂದ ಮುಂಡರಗಿ ತಾಲೂಕಿನಾದ್ಯಂತ ನೂರಾರು ಹೆಕ್ಟೇರ್ ಪ್ರದೇಶದಲ್ಲಿ ತೋಟಗಾರಿಕಾ ಬೆಳೆಗಳನ್ನು ಬೆಳೆಯಲು ಸಾಧ್ಯವಾಗಿದೆ. ಕೆರೆಗಳ ನೀರು ಪೋಲಾಗದಂತೆ ಬಳಕೆ ಮಾಡಿ, ಪ್ರತಿಯೊಬ್ಬ ರೈತರೂ ಉತ್ತಮ ತೋಟಗಾರಿಕಾ ಬೆಳೆಗಳನ್ನು ಬೆಳೆಯಲು ಮುಂದಾಗಬೇಕು.
>
> **– ಮಹಮ್ಮದರಫಿ ಎಮ್.ತಾಂಬೋಟಿ.**
> ಹಿರಿಯ ಸಹಾಯಕ ತೋಟಗಾರಿಕಾ ನೀರ್ದೇಶಕ, ಮುಂಡರಗಿ.

# ಬಸವ ಜಯಂತಿ ಮೆರವಣಿಗೆ ನಾಳೆ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕದ ಸಾಂಸ್ಕೃತಿಕ ನಾಯಕ, ವಿಶ್ವಗುರು, ಲಿಂಗಾಯತ ಧರ್ಮ ಸಂಸ್ಥಾಪಕ ಬಸವಣ್ಣನವರ 920ನೇ ಜಯಂತಿ ಅಂಗವಾಗಿ ಎಪ್ರಿಲ್ 30ರ ಮುಂಜಾನೆ 9 ಗಂಟೆಗೆ ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳವರು ಮೆರವಣಿಗೆಗೆ ಚಾಲನೆ ನೀಡುವರು. ಮೆರವಣಿಗೆಯು ಶ್ರೀಮಠದಿಂದ ಪ್ರಾರಂಭವಾಗಿ ಮಹೇಂದ್ರಕರ ವೃತ್ತ, ಹುಯಿಲಗೋಳ ವೃತ್ತ, ಬಸವೇಶ್ವರ ವೃತ್ತ, ಕೆ.ಎಚ್. ಪಾಟೀಲ ವೃತ್ತ, ಮಾಳಶೆಟ್ಟಿ ವೃತ್ತ, ರೋಟರಿ ವೃತ್ತ, ಮಹಾತ್ಮ ಗಾಂಧಿ ವೃತ್ತದ ಮೂಲಕ ತೋಂಟ-ದಾರ್ಯ ಮಠಕ್ಕೆ ತಲುಪುವುದು.



ನಂತರ ಗದಗ ಜಿಲ್ಲಾಡಳಿತದ ವತಿಯಿಂದ ಶ್ರೀಮಠ ಶಿವಾನುಭವ ಮಂಟಪದಲ್ಲಿ ಮುಂಜಾನೆ 11 ಗಂಟೆಗೆ ಉಪನ್ಯಾಸ ಕಾರ್ಯಕ್ರ ಏರ್ಪಡಿಸಲಾಗಿದ್ದು, ಕಾರ್ಯಕ್ರಮದ ಸಾನ್ನಿಧ್ಯವನ್ನು ಪೂಜ್ಯಶ್ರೀ ಮ.ನಿ.ಪ್ರ. ಶಾಂತಲಿಂಗ ಮಹಾಸ್ವಾಮಿಗಳವರು ವಹಿಸುವರು. ಅಧ್ಯಕ್ಷತೆಯನ್ನು ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲ ವಹಿಸುವರು. ಶರಣ ತತ್ವ ಚಿಂತಕ ಜಿ.ಎಸ್. ಪಾಟೀಲ ವಿಜಯಪುರ ಉಪನ್ಯಾಸ ನೀಡುವರು.

ಮೆರವಣಿಗೆಯಲ್ಲಿ ಬಸವದಳ-ಬಸವಕೇಂದ್ರ-ಲಿಂಗಾಯತ ಪ್ರಗತಿಶೀಲ ಸಂಘ, ಶ್ರೀ ಜಗದ್ಗುರು ತೋಂಟದಾರ್ಯ ಮಠದ ಜಾತ್ರಾ ಸಮಿತಿ-2025, ಕನ್ನಡ ಸಾಹಿತ್ಯ ಪರಿಷತ್ತು, ಶರಣ ಸಾಹಿತ್ಯ ಪರಿಷತ್ತು, ಕದಳಿ ಮಹಿಳಾ ವೇದಿಕೆ, ಬಸವ ಯೋಗ ಕೇಂದ್ರ, ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ, ಜಾಗತಿಕ ಲಿಂಗಾಯತ ಮಹಾಸಭೆ, ಶರಣರಾದ ಜೇಡರ ದಾಸಿಮಯ್ಯ, ಮಾದಾರ ಚನ್ನಯ್ಯ, ಡೋಹರ ಕಕ್ಕಯ್ಯ, ನೂಲಿಯ ಚಂದಯ್ಯ, ಸಮಗಾರ ಹರಳಯ್ಯ, ಮಡಿವಾಳ ಮಾಚಯ್ಯ, ಅಂಬಿಗರ ಚೌಡಯ್ಯ, ಮೇದಾರ ಕೇತಯ್ಯ, ಹೂಗಾರ ಮಾದಯ್ಯ, ಶಿವಯೋಗಿ ಸಿದ್ಧರಾಮೇಶ್ವರ, ಹಡಪದ ಅಪ್ಪಣ್ಣ, ಕುಂಬಾರ ಗುಂಡಯ್ಯ, ಕುರುಬ ಗೊಲ್ಲಾಳೇಶ, ದಲಿತ ಸಂಘರ್ಷ ಸಮಿತಿ, ದಲಿತ ಕಲಾ ಬಳಗ ಹಾಗೂ ಬಸವಪರ ಸಂಘಟನೆಗಳ ಮುಖಂಡರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರ, ಜ.ತೋಂಟದಾರ್ಯ ಮಠದ ಜಾತ್ರಾ ಸಮಿತಿ-2025ರ ಅಧ್ಯಕ್ಷರಾದ ಡಾ. ಧನೇಶ ದೇಸಾಯಿ ಹಾಗೂ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

# ಅಧಿಕಾರಿಗಳ ಆತ್ಮಸ್ಥೈರ್ಯ ಕುಗ್ಗಿಸದಿರಿ



■ವಿಜಯಸಾಕ್ಷಿ ಸುದ್ದಿ, ಗದಗ

ಬ'ಳ'ಗಾವಿಂು'ಂಲ್ಲಿ ಸೋಮವಾರ ನಡೆದ ಕಾಂಗ್ರೆಸ್ ಸಮಾವೇಶದ ಸಂದರ್ಭದಲ್ಲಿ ಸಿದ್ದರಾಮಯ್ಯ ವಿರುದ್ಧ ಮಹಿಳೆಯರು ದಿಟ್ಟತನದಿಂದ ಘೋಷಣೆ ಕೂಗುವ ಮೂಲಕ ತಮ್ಮ ಪ್ರತಿಭಟನೆ ನಡೆಸಿದ್ದರು.

ಇದರಿಂದ ತಾಳ್ಮೆ ಕಳೆದುಕೊಂಡ ಸಿಎಂ ಸಿದ್ದರಾಮಯ್ಯ ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಯ ಮೇಲೆ ಕೈ ಮಾಡಲು ಮುಂದಾಗಿದ್ದು ಅವರ ಘನತೆಗೆ ತಕ್ಕುದಲ್ಲ. ಅವರಿಗೆ ಅಧಿಕಾರದ ಮದವೇರಿದೆ ಎಂದು ಬಿಜೆಪಿ ಯುವ ಮುಖಂಡ ವಸಂತ ಪಡಗದ ಹೇಳಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಅಹಿಂದ ನಾಯಕ, ರಾಜ್ಯ ಕಂಡ ಅತ್ಯಪರೂಪದ ಮುಖ್ಯಮಂತ್ರಿಗೆ ಒಬ್ಬ ಹಿರಿಯ ಪೊಲೀಸ್ ಅಧಿಕಾರಿಯ ಮೇಲೆ ಬಹಿರಂಗ ಸಮಾವೇಶದಲ್ಲಿ ಹೊಡೆಯಲು ಕೈ ಎತ್ತಿದ್ದು ಖಂಡನೀಯ. ಕೇವಲ 5 ವರ್ಷ ಅಧಿಕಾರದಲ್ಲಿದ್ದುಕೊಂಡು 40 ವರ್ಷಗಳ ಕಾಲ ಕೆಲಸ ಮಾಡುವ ಸರ್ಕಾರಿ ನೌಕರರನ್ನು ಗೌರವಯುತವಾಗಿ ನಡೆಸಿಕೊಳ್ಳಬೇಕು.

ಇಂತಹ ಘಟನೆಗಳ ಮೂಲಕ ಪೊಲೀಸ್ ಅಧಿಕಾರಿ, ಸಿಬ್ಬಂದಿಗಳ ಆತ್ಮಸ್ಥೈರ್ಯ ಕುಗ್ಗಿಸಲು ಹೊರಟಿದ್ದಾರೆ. ಕೂಡಲೇ ಸಿಎಂ ಸಿದ್ದರಾಮಯ್ಯ ಅಧಿಕಾರಿಯ ಬಳಿ ಕ್ಷಮೆ ಕೇಳಬೇಕೆಂದು ಆಗ್ರಹಿಸಿದ್ದಾರೆ.

# ಅನಧಿಕೃತ ಮಾರಾಟ ಮಳಿಗೆಗಳನ್ನು ತೆರವುಗೊಳಿಸಿ




■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ತೋಂಟ-ದಾರ್ಯ ಮಠದ ಜಾತ್ರಾ ಮಹೋತ್ಸವದ ಹೆಸರಿನಲ್ಲಿ ನಗರದ ಹೃದಯ ಭಾಗದ ನಗರ ಸಭೆಗೆ ಒಳಪಡುವ ಸಾರ್ವಜನಿಕ ರಸ್ತೆಯಲ್ಲಿ ಅನಧಿಕೃತ ಹಾಗೂ ತಾತ್ಕಾಲಿಕವಾಗಿ ಮಾರಾಟ ಮಳಿಗೆಯನ್ನು ನಿರ್ಮಾಣ ಮಾಡಿಕೊಂಡು ಅನ್ಯ ರಾಜ್ಯದ ವ್ಯಾಪಾರಿಗಳು ಪ್ರತಿ ದಿನ ಲಕ್ಷಾಂತರ ರೂಪಾಯಿ ವ್ಯಾಪಾರ ಮಾಡುತ್ತ ಸ್ಥಳೀಯ ಯುವಕರ ಉದ್ಯೋಗಕ್ಕೆ ಕುತ್ತು ತಂದಿದ್ದಾರೆ ಎಂದು ಉದ್ಯೋಗ ಸೇನಾ ಅಧ್ಯಕ್ಷ ಸತೀಶ ಕುಂಬಾರ ನೇತೃತ್ವದಲ್ಲಿ ಅಪರ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಅಲ್ಲದೆ, ಸಾರ್ವಜನಿಕ ರಸ್ತೆಗಳಲ್ಲಿ ಅನಧಿಕೃತ ಹಾಗೂ ತಾತ್ಕಾಲಿಕವಾಗಿ ನಿರ್ವಾಣಗೊಂಡಿರುವ ಮಾರಾಟ ಮಳಿಗೆಯಿಂದ ಸಾರ್ವಜನಿಕರಿಗೆ ಹಾಗೂ ಶ್ರೀಮಠದ ಭಕ್ತರಿಗೆ ಸಂಚಾರಕ್ಕೂ ತೊಂದರೆಯಾಗುತ್ತಿರುವ ಕಾರಣ, ಇಂತಹ ಅನಧಿಕೃತ, ತಾತ್ಕಾಲಿಕ ಮಾರಾಟ ಮಳಿಗೆಯನ್ನು ತೆರವುಗೊಳ್ಳಿಸಿ ಸ್ಥಳೀಯ ಯುವಕರಿಗೆ ಉದ್ಯೋಗಕ್ಕೆ ಅವಕಾಶ ಮಾಡಿಕೊಡಬೇಕು. ಸಂಚಾರ ವ್ಯವಸ್ಥೆಯನ್ನು ಸುಗಮಗೊಳ್ಳಿಸಲು ಜಿಲ್ಲಾಡಳಿತ ಮಧ್ಯ ಪ್ರವೇಶಿಸಿ ಈ ಜಾತ್ರಾ ಮಹೋತ್ಸವದ ಹೆಸರಿನಲ್ಲಿ ನಿರ್ವಾಣಗೊಂಡಿರುವ ಅನಧಿಕೃತ ಮಳಿಗೆಗಳನ್ನು ಕೂಡಲೇ ತೆರವುಗೊಳಿಸಲು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಸದಾನಂದ ಸಿಂಗ್ ಗುರ್ಲಹೊಸೂರ, ಪರಶುರಾಮ ಆಡಿನ, ಪಂಚಾಕ್ಷರಿ ಸಾಲಿಮಠ, ಸಿದ್ದು ಹಳ್ಳದ, ಈರಣ್ಣ ವಾಲ್ಮೀಕಿ, ಲಕ್ಷ್ಮಣ ಗೌಡರ, ಅರುಣ ಮರಾಠಿ, ಬಸವರಾಜ ಇಟಗಿ ಮುಂತಾದವರು ಹಾಜರಿದ್ದರು.

# ಭಯೋತ್ಪಾದಕರಿಗೆ ಜಾತಿ-ಧರ್ಮವೆಂಬುದಿಲ್ಲ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಜಮ್ಮು-ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ಉಗ್ರರು ನಡೆಸಿರುವ ದಾಳಿಯನ್ನು ಖಂಡಿಸಿ ಶಿರಹಟ್ಟಿಯ ಕರ್ನಾಟಕ ಮುಸ್ಲಿಂ ಯುನಿಟಿ ಕೇಂದ್ರ ಸರ್ಕಾರಕ್ಕೆ ತಹಸೀಲ್ದಾರರ ಮೂಲಕ ಮನವಿ ಸಲ್ಲಿಸಿತು.

'ಮಾನವೀಯತೆಯೇ ಮೊದಲ ಧರ್ಮ'ವಾಗಿದ್ದು, ಭಯೋತ್ಪಾದಕರಿಗೆ ಜಾತಿ-ಧರ್ಮವೆಂಬುದಿಲ್ಲ. ಇವರಿಗೆ ಭಯೋತ್ಪಾದನೆಯೇ ಜಾತಿ ಮತ್ತು ಧರ್ಮವಾಗಿದೆ. ಸದರಿ ಅಮಾಯಕರ ಮೇಲೆ ದಾಳಿ ನಡೆಸಿದವರು ಯಾವುದೇ ಧರ್ಮಕ್ಕೆ ಸೇರಿದವರಾಗಿದ್ದರೂ ಅವರಿಗೆ ಕಠಿಣ ಶಿಕ್ಷೆಯಾಗಬೇಕು. ಶಾಂತಿ ಪ್ರಿಯ ಭಾರತದಲ್ಲಿ ಅಶಾಂತಿ ಸೃಷ್ಟಿಸುವ ಇಂತಹ ಹೇಯ ಕೃತ್ಯಗಳ ವಿರುದ್ಧ ಕೇಂದ್ರ ಸರಕಾರ ಕಠಿಣವಾದ ಕ್ರಮಗಳನ್ನು ಕೈಗೊಳ್ಳಬೇಕು. ಈ ಘಟನೆಯಲ್ಲಿ ಭಾಗಿಯಾದ ಭಯೋತ್ಪದಕರನ್ನು ಆದಷ್ಟು ಬೇಗ ಪತ್ತೆಹಚ್ಚಿ ಕಠಿಣ ಶಿಕ್ಷೆಗೆ ಗುರಿಪಡಿಸಬೇಕು ಹಾಗೂ ಈ ಘಟನೆಯಲ್ಲಿ ಮೃತಪಟ್ಟ ಕುಟುಂಬಗಳಿಗೆ ಸೂಕ್ತ ಪರಿಹಾರ ನೀಡಬೇಕೆಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಶಿರಹಟ್ಟಿ ಕರ್ನಾಟಕ ಮುಸ್ಲಿಂ ಯುನಿಟಿ ಪದಾಧಿಕಾರಿಗಳದ ರಿಯಾಜ್ ಲಕ್ಷ್ಮೇಶ್ವರ, ಇಬ್ರಾಹಿಂ ಮನಿಯಾರ, ಹಾಜಿ ಖುರೇಶ್ ಮನಿಯಾರ, ಹಾಜಿ ಸಾದಿಕ್ ಮುಳಗುಂದ, ಮೌಲಾ ಕಾರಬೂದಿ, ಸುಭಾನಿ ಬರದೂರ ಉಪಸ್ಥಿತರಿದ್ದರು.

### ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ಕೃತ್ಯಕ್ಕೆ ಯುವ ಕಾಂಗ್ರೆಸ್ ಖಂಡನೆ

# ಹೇಯ ಕೃತ್ಯಕ್ಕೆ ಆಕ್ರೋಶ

■ವಿಜಯಸಾಕ್ಷಿ ಸುದ್ದಿ, ಗದಗ

ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ಉಗ್ರಗಾಮಿಗಳು ನಡೆಸಿದ ಹೇಯ ಕೃತ್ಯದಲ್ಲಿ ಸಾವನ್ನಪ್ಪಿದ ನಾಗರಿಕರಿಗೆ ನಗರದ ಮಹಾತ್ಮ ಗಾಂಧಿ ವೃತ್ತದಲ್ಲಿ ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಹಾಗೂ ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ವತಿಯಿಂದ ಮೇಣದಬತ್ತಿ ಹಚ್ಚಿ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೃಷ್ಣಗೌಡ ಎಚ್.ಪಾಟೀಲ ನೇತೃತ್ವದಲ್ಲಿ ನಡೆದ ಶ್ರದ್ಧಾಂಜಲಿ ಕಾರ್ಯಕ್ರಮದಲ್ಲಿ ಜಿಲ್ಲಾ ಕಾಂಗ್ರೆಸ್ ಸಮಿತಿ ಹಾಗೂ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿಯ ನೂರಾರು ಕಾರ್ಯಕರ್ತರು ಮೇಣದ ಬತ್ತಿ ಹಚ್ಚಿ ಮೌನಾಚರಣೆಯ ಮೂಲಕ ಭಯೋತ್ಪಾದಕರ ಗುಂಡಿಗೆ ಬಲಿಯಾದ ಪ್ರವಾಸಿಗರಿಗೆ ಶ್ರದ್ಧಾಂಜಲಿ ಸಲ್ಲಿಸಿದರು.



> ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೃಷ್ಣಗೌಡ ಎಚ್.ಪಾಟೀಲ ಮಾತನಾಡಿ, ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ದಾಳಿ ನಡೆಸಿ ಹತ್ಯೆ ಮಾಡಿದ ಘಟನೆಯು ಅತ್ಯಂತ ಹೇಯ ಕೃತ್ಯವಾಗಿದ್ದು, ಮಾನವೀಯತೆಯ ಕಗ್ಗೊಲೆಯಾದಂತಿದೆ. ಎಲ್ಲ ಜಾತಿ, ಧರ್ಮದವರು ಒಗ್ಗಟ್ಟಾಗಿರುವ ನಮ್ಮ ಭಾರತ ದೇಶದಲ್ಲಿ ವಿಭಜನೆ ಆಗಬೇಕು ಎಂಬ ಹುನ್ನಾರವನ್ನು ಇಟ್ಟುಕೊಂಡು ಮಾಡಿರುವ ಭಯೋತ್ಪಾದಕರ ದಾಳಿಯನ್ನು ನಾವೆಲ್ಲರೂ ಏಕತೆಯಿಂದ, ಒಗ್ಗಟ್ಟಿನಿಂದ ಖಂಡಿಸಬೇಕು ಎಂದು ಹೇಳಿದರು.

ಗದಗ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ, ತಾ.ಪಂ ಮಾಜಿ ಸದಸ್ಯ ವಿದ್ಯಾಧರ ದೊಡ್ಡಮನಿ ಮಾತನಾಡಿದರು. ನಗರಸಭೆ ಮಾಜಿ ಅಧ್ಯಕ್ಷ ಸುರೇಶ ಕಟ್ಟಿಮನಿ, ಮುಖಂಡರಾದ ಬಸವರಾಜ ಕಡೆಮನಿ, ಎಸ್.ಎನ್. ಬಳ್ಳಾರಿ, ಷರೀಫ್ ಬಿಳೆಯಲಿ, ಬಾಷಾಸಾಬ ಮಲ್ಲಸಮುದ್ರ, ಸಯ್ಯದಖಾಲಿದ ಕೊಪ್ಪಳ, ಅನಿಲ ಗರಗ, ಲಕ್ಷ್ಮಣ ಭಜಂತ್ರಿ, ಸರ್ಫರಾಜ್ ಬಬರ್ಚಿ, ಎಂ.ಸಿ. ಶೇಖ್, ಡಿ.ಬಿ. ಮೂರ್ನಾಳ, ಮಂಜುನಾಥ ಪೂಜಾರ, ಮಹಮ್ಮದ ಶಾಲಗಾರ, ಉಮರಫಾರೂಖ್ ಹುಬ್ಬಳ್ಳಿ, ಮೋಹನ ಚಂದಪ್ಪನವರ, ಮಾರ್ತಾಂಡಪ್ಪ ಹಾದಿಮನಿ, ಡಿ.ಬಿ. ಜೋಗಣ್ಣವರ, ವಸಂತ ಸಿದ್ದಮನಹಳ್ಳಿ, ಚಿಮ್ಮಿ ನದಾಫ್, ಫರ್ವಿನಬಾನು ಮುಲ್ಲಾ, ಕಮಲಾಬಾಯಿ ಹಾದಿಮನಿ, ದ್ರಾಕ್ಷಾಯಿಣಿ ಹಾಸಿಲಕರ, ಮಹಾಂತೇಶ ಮಡಿವಾಳರ, ಉಮರಫಾರೂಖ್ ಬಾರಿಗಿಡದ, ಮೋಹನ ಕಟ್ಟಿಮನಿ, ಅಬ್ದುಲಮುನಾಫ ಮುಲ್ಲಾ, ಪರಪ್ಪ ಕಮತರ, ರಾಘವೇಂದ್ರ ದೊಡ್ಡಮನಿ, ದಯಾನಂದ ಪವಾರ, ಚಾಂದಸಾಬ ಕೊಟ್ಟೂರ, ಸೇರಿ ಪಕ್ಷದ ಮುಖಂಡರು, ಕಾರ್ಯಕರ್ತರು ಹಾಜರಿದ್ದರು.

# ಎಲ್‌ಐಸಿ ಸ್ನೇಹಜೀವಿ ಕ್ರಿಕೆಟ್ ಕ್ರೀಡೋತ್ಸವ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜೀವವಿಮಾ ನಿಗಮ ಗದಗ ಶಾಖೆಯ ವಿಮಾ ಪ್ರತಿನಿಧಿಗಳು ಹಾಗೂ ಸೇಲ್ಸ್ ವಿಭಾಗದ ನೌಕರರಿಂದ ಎಲ್‌ಐಸಿ ಸ್ನೇಹಜೀವಿ ಕ್ರಿಕೆಟ್ ಕ್ರೀಡೋತ್ಸವ ಗದಗ ಬಿಪಿಎಡ್ ಕಾಲೇಜ್ ಮೈದಾನದಲ್ಲಿ ಜರುಗಿತು.

ಪಂದ್ಯಾವಳಿಯನ್ನು ಎಲ್‌ಐಸಿ ಶಾಖೆಯ ಮ್ಯಾನೇಜರ್ ಎಚ್.ಎಂ. ಭಜಂತ್ರಿ ಉದ್ಘಾಟಿಸಿ ಮಾತನಾಡಿ, ಕ್ರೀಡೆಗಳು ಪ್ರತಿನಿಧಿಗಳು ಹಾಗೂ ಸಿಬ್ಬಂದಿ ವರ್ಗದವರ ನಡುವೆ




ಸ್ನೇಹ-ಸಂಬಂಧ ಬೆಳೆಯಲು ಸಹಕಾರಿಯಾಗುತ್ತದೆ. ಕ್ರಿಕೆಟ್ ಆಡುವುದರಿಂದ ದೈಹಿಕವಾಗಿ, ಮಾನಸಿಕವಾಗಿ ಸದೃಢರಾಗುತ್ತಾರೆ ಎಂದರು. ಕ್ರೀಡಾಕೂಟದಲ್ಲಿ ಗದಗ ಟಕ್ ಟೀಮ್, ಗದಗ ಉಮಂಗ್ ಮತ್ತು ಗದಗ ಉತ್ಸವ ತಂಡಗಳು ಭಾಗವಹಿಸಿದ್ದವು. ಎಲ್‌ಐಸಿ ಉಪ ಶಾಖಾಧಿಕಾರಿ ಮಹಾಂತೇಶ ಪಾರಿತೋಷಕವನ್ನು ವಿತರಿಸಿದರು. ಈ ಸಂದರ್ಭದಲ್ಲಿ ವಿಮಾ ಪ್ರತಿನಿಧಿಗಳಾದ ಡಿ.ಸಿ. ಜವಳಿ, ಯಲ್ಲಪ್ಪ ಎಚ್.ಬಾಬರಿ, ರಾಜು ಗಾಣಿಗೇರ, ಜಗದೀಶ ಗೌಡರ, ಎಸ್.ವಿ. ಮಾಳಿ, ಕೆ.ಪಿ. ಅಳವುಂಡಿ, ಎಲ್.ಐ. ಪಿಡ್ಡನಗೌಡರ, ಡಿ.ಎಚ್. ಗೋಡಬಾಲಿ, ರಾಜು ಕಾರಡಗಿ, ಎಸ್.ಎಂ. ಬಳಿಗಾರ, ಲಮಾಣಿ, ಪ್ರಭು ರವದಿ, ಈರಣ್ಣ ದೋಟಿಕಲ್ಲ, ಅಭಿವೃದ್ಧಿ ಅಧಿಕಾರಿಗಳಾದ ರವಿ ಹಕ್ಕಿ, ಸಿದ್ದಾರ್ಥ್, ಕಾಮತ್ ಮುಂತಾದವರು ಉಪಸ್ಥಿತರಿದ್ದರು.

# ಹನುಮಂತ ಕೆಂಪನ್ನವರಗೆ ಬೆಳ್ಳಿ ಪದಕ

■ವಿಜಯಸಾಕ್ಷಿ ಸುದ್ದಿ, ಗದಗ

ಸ್ಕೂಲ್ ಗೇಮ್ ಫೆಡರೇಶನ್ ಆಫ್ ಇಂಡಿಯಾ ವತಿಯಿಂದ ಇತ್ತೀಚೆಗೆ ಜರುಗಿದ 17 ವರ್ಷ ವಯೋಮಿತಿಯೊಳಗಿನ ಫ್ರೀ ಸ್ಟೈಲ್ ಕುಸ್ತಿಯ 92 ಕೆ.ಜಿ ವಿಭಾಗದಲ್ಲಿ ದಾವಣಗೇರಿ ಕ್ರೀಡಾ ವಸತಿ ನಿಲಯದ ವಿದ್ಯಾರ್ಥಿ ಹನುಮಂತ ವಿಠ್ಠಲ ಕೆಂಪನ್ನವರ ಬೆಳ್ಳಿ ಪದಕ ಪಡೆದುಕೊಂಡಿದ್ದಾನೆ.

ಡಾ. ವಿನೋದಕುಮಾರ ಅವರು ತರಬೇತಿ ನೀಡಿದ್ದರು. ಗದಗ ಜಿಲ್ಲಾ ಆದಿಕವಿ ಮಹರ್ಷಿ




ವಾಲ್ಮೀಕಿ ವಿವಿಧೋದ್ದೇಶಗಳ ಸೇವಾ ಸಂಘ (ಎಸ್‌ಟಿ) ಅಧ್ಯಕ್ಷರಾದ ವಸಂತ ಪರಸಪ್ಪ ಸಿದ್ದಮ್ಮನಹಳ್ಳಿ ಸಾಧಕ ಕುಸ್ತಿಪಟುವನ್ನು ಅಭಿನಂದಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka